MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

## ಮಾತಿನ ಚಿತ್ರೀಕರಣ ಮುಗಿಸಿದ ದಿ ಡೆವಿಲ್

ಶ್ರೀ ಜೈ ಮಾತ ಕಂಬೈನ್ಸ್ ಲಾಂಛನದಲ್ಲಿ ಅದ್ದೂರಿಯಾಗಿ ನಿರ್ಮಾಣವಾಗುತ್ತಿರುವ, ಪ್ರಕಾಶ್ ವೀರ್ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸುತ್ತಿರುವ ಹಾಗೂ ಚಾಲೆಂಜಿಂಗ್ ಸ್ಟಾರ್ ದರ್ಶನ್ ನಾಯಕರಾಗಿ ನಟಿಸುತ್ತಿರುವ ಬಹು ನಿರೀಕ್ಷಿತ 'ದಿ ಡೆವಿಲ್' ಚಿತ್ರದ ಮಾತಿನ ಭಾಗದ ಚಿತ್ರೀಕರಣ ಮುಕ್ತಾಯವಾಗಿದೆ. ಬೆಂಗಳೂರು, ರಾಜಸ್ಥಾನ ಮುಂತಾದ ಕಡೆ ಚಿತ್ರೀಕರಣ ನಡೆದಿದೆ. ಸದ್ಯದಲ್ಲೇ ಮಾತಿನ ಜೋಡಣೆ(ಡಬ್ಬಿಂಗ್) ಆರಂಭವಾಗಲಿದೆ.




| | | | | | | |
|---|---|---|---|---|---|---|
| ಸಂಪುಟ: 04 | ಸಂಚಿಕೆ: 216 | ಬುಧವಾರ : 11-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00 |
| VOLUME: 04 | ISSUE: 216 | WEDNESDAY : 11-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00 |

## ಕೇಂದ್ರ ಸಚಿವ ಕುಮಾರಸ್ವಾಮಿಯಿಂದ
# ದೇವದುರ್ಗದಲ್ಲಿ ಹತ್ತಿ ಕಾರ್ಖಾನೆ ಸ್ಥಾಪನೆ ಭರವಸೆ


ಯುವ ಮಾರ್ಗ ಸುದ್ದಿ

**ದೇವದುರ್ಗ, ಜೂ.10–** ದೇವದುರ್ಗ ವಿಧಾನಸಭೆ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ ಅವರು ಇಂದು ನವದೆಹಲಿಯಲ್ಲಿ ಕೇಂದ್ರ ಬೃಹತ್ ಕೈಗಾರಿಕಾ ಮತ್ತು ಉಕ್ಕು ಸಚಿವ ಹೆಚ್. ಡಿ. ಕುಮಾರಸ್ವಾಮಿ ಅವರನ್ನು ಸಚಿವಾಲಯದ ಕಚೇರಿಯಲ್ಲಿ ಭೇಟಿ ಮಾಡಿದರು.

ದೇವದುರ್ಗ ಕ್ಷೇತ್ರದ ಜನರು ಉದ್ಯೋಗಕ್ಕಾಗಿ ಗುಳೆ ಹೋಗುವುದನ್ನು ತಡೆಯುವ ನಿಟ್ಟಿನಲ್ಲಿ ಕ್ಷೇತ್ರದಲ್ಲಿ ಬೃಹತ್ ಕೈಗಾರಿಕೆ ಸ್ಥಾಪನೆ ಕುರಿತು ಹಾಗೂ ಇತರೆ ಹಲವು ಅಭಿವೃದ್ಧಿ ಕಾರ್ಯಗಳ ಬಗ್ಗೆ ಈ ಸಂದರ್ಭದಲ್ಲಿ ಚರ್ಚೆ ನಡೆಸಲಾಯಿತು. ಕೇಂದ್ರ ಸಚಿವರು ಈ ಬಗ್ಗೆ ಸಕಾ ರಾತ್ಮಕವಾಗಿ ಸ್ಪಂದಿಸಿ, ದೇವದುರ್ಗದಲ್ಲಿ ಮುಂದಿನ ದಿನಗಳಲ್ಲಿ ಹತ್ತಿ ಕಾರ್ಖಾನೆ ಸ್ಥಾಪಿಸುವ ಭರವಸೆ ನೀಡಿದರು. ಇದರಿಂದ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಹೆಚ್ಚಾಗಿ, ಜನರ ಗುಳೆ ಹೋಗುವಿಕೆ ಕಡಿಮೆ ಯಾಗುವ ನಿರೀಕ್ಷೆ ಇದೆ.



# ದಯಾನಂದ ಅಮಾನತು ಆದೇಶ ಹಿಂಪಡೆಯಲು
## ವಾಲ್ಮೀಕಿ ನಾಯಕ ಮಹಾಸಭಾದಿಂದ ಮನವಿ




ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.10–**ಬೆಂಗಳೂರು ಪೊಲೀಸ್ ಆಯುಕ್ತ ಬಿ. ದಯಾನಂದ ಅವರನ್ನು ಅಮಾನತುಗೊಳಿಸಿರುವ ಸರ್ಕಾರದ ಆದೇಶವನ್ನು ಕೂಡಲೇ ಹಿಂಪಡೆಯುವಂತೆ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕವು ಮುಖ್ಯಮಂತ್ರಿಗಳಿಗೆ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಮೂಲಕ ಮನವಿ ಸಲ್ಲಿಸಿದೆ.

ಜಿಲ್ಲಾಧ್ಯಕ್ಷ ಶರಣಬಸವನಾಯಕ ಜಾನೇಕಲ್ ಮಾತನಾಡಿ, ಬೆಂಗಳೂರಿನಲ್ಲಿ ವಿಧಾನಸೌಧ ಮತ್ತು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ತಂಡ ಗೆಲುವು ಸಾಧಿಸಿದಾಗ ನಡೆದ ಸಂಭ್ರಮಾಚರಣೆಗೆ ಪೊಲೀಸ್ ಆಯುಕ್ತ ಬಿ. ದಯಾನಂದ ತಕ್ಷಣವೇ ಅನುಮತಿ ನಿರಾಕರಿಸಿದ್ದರು. ಆದರೂ, ಪ್ರಭಾವಿ ನಾಯಕರ ಬೆಂಬಲದೊಂದಿಗೆ ಆರ್‌ಸಿಬಿ ತಂಡದ ಮುಖ್ಯಸ್ಥರು ಆಟಗಾರರನ್ನು ಬೆಂಗಳೂರಿಗೆ ಕರೆಸಿದ್ದರಿಂದ ಲಕ್ಷಾಂತರ ಅಭಿಮಾನಿಗಳು ಜಮಾಯಿಸಿ, ಕಾಲ್ತುಳಿತದಲ್ಲಿ 11 ಜನರು ಸಾವನ್ನಪ್ಪಿದ್ದಾರೆ. ಈ ಘಟನೆಗೆ ಪೊಲೀಸ್ ಆಯುಕ್ತರನ್ನು ಬಲಿಪಶು ಮಾಡಿ ಅಮಾನತುಗೊಳಿಸಿರುವುದು ಸರಿಯಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಅಮಾನತು ಆದೇಶವನ್ನು ಹಿಂಪಡೆಯದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಸಿದರು.

ಪಟ್ಟಣದ ವಾಲ್ಮೀಕಿ ವೃತ್ತದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಪದಾಧಿಕಾರಿಗಳು ಮತ್ತು ಸಮುದಾಯದವರು ಪ್ರತಿಭಟನೆ ನಡೆಸಿ, ಮೆರವಣಿಗೆ ಮೂಲಕ ಬಸವ ವೃತ್ತದಿಂದ ತಹಸೀಲ್ದಾರ್ ಕಚೇರಿಯವರೆಗೆ ತೆರಳಿ ಮನವಿ ಸಲ್ಲಿಸಿದರು.

2ನೇ ಪುಟಕ್ಕೆ

# ವೈಜ್ಞಾನಿಕ ಹೈನುಗಾರಿಕೆಯಿಂದ ಮಾತ್ರ ರೈತರಿಗೆ ಅಧಿಕ ಲಾಭ: ಡಾ. ಮಲ್ಲರೆಡ್ಡಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.10–**ತಾಲೂಕಿನ ಬ್ಯಾಗವಾಟ ಗ್ರಾಮದಲ್ಲಿ ರಾಯಚೂರು ಕೃಷಿ ವಿಜ್ಞಾನ ಕೇಂದ್ರ ವತಿಯಿಂದ ನಡೆದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ–2025 ಅಂಗವಾಗಿ ನಡೆದ ರೈತರೊಂದಿಗೆ ನೇರ ಸಂವಾದ ಕಾರ್ಯಗಾರಕ್ಕೆ ರಾಯಚೂರು ಕೃಷಿ ವಿಜ್ಞಾನ ಕೇಂದ್ರದ ಬೇಸಾಯಶಾಸ್ತ್ರಜ್ಞರಾದ ಡಾ. ಮಲ್ಲರೆಡ್ಡಿ ಚಾಲನೆ ನೀಡಿ ಮಾತನಾಡಿ ರೈತರು ಹೆಚ್ಚು ಹಾಲಿನ ಇಳುವರಿಯನ್ನು ಪಡೆದಲ್ಲಿ ಮಾತ್ರ ಹೆಚ್ಚು ಅದಾಯವನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಅದ್ದರಿಂದ ಸುಧಾರಿತ ತಳಿಯ ಹಸು ಹಾಗೂ



ಎಮ್ಮೆಗಳನ್ನು ಸಾಕಣಿಕೆ ಮಾಡಬೇಕು ಹಾಗೂ ಕೇವಲ ಒಣ ಭತ್ತದ ಹುಲ್ಲನ್ನು ಮಾತ್ರ ನೀಡದೆ ಹಸಿ ಮೇವಿನ ಜೊತೆಗೆ ರಸಮೇವು ತಯಾರಿಸಿ ಕೊಡುವುದರಿಂದ ರಾಸುಗಳಲ್ಲಿ ಪೋಷಕಾಂಶಗಳ ಸಮತೋಲನ ಕಾಪಾಡಬಹುದು .ಹಸಿರು ಮೇವನ್ನು ನೀಡುವ ವಿವಿಧ ಮೇವಿನ ಬೆಳೆಗಳಾದ ಹೈಬ್ರಿಡ್ ನೇಪಿಯರ್, ಬಹುವಾರ್ಷಿಕ ಮೇವಿನ ಜೋಳ, ಬೇಲಿ ಮೆಂತ್ಯೆ, ಕುದುರೆ ಮೆಂತ್ಯೆ, ಪ್ಯಾರಾ ಹುಲ್ಲು ಮುಂತಾ 2ನೇ ಪುಟಕ್ಕೆ

# ಬುದ್ಧ, ಬಸವ, ಅಂಬೇಡ್ಕರ್ ಜಾಗತಿಕ ಮಟ್ಟದ ಮಹಾನ್ ನಾಯಕರು:ಎನ್‌ಎಸ್‌ಬಿ



ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.10–** ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರು ಜಾಗತಿಕ ಮಟ್ಟದ ಮಹಾನ್ ದಾರ್ಶನಿಕರಾಗಿದ್ದಾರೆ. ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಇಂದಿನ ಪೀಳಿಗೆಯು ಸಾಗಬೇಕಾಗಿದೆ ಎಂದು ಸಣ್ಣ ನೀರವಾರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಅವರು ಹೇಳಿದರು.

ಮಂಗಳವಾರ ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಶ್ರೀ ಬಸವೇಶ್ವರ ಸಭಾಂಗಣದಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನಿರ್ದೇಶನಾಲಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನೌಕರರ ಸಂಘ, ಡಾ.ಬಿ.ಆರ್ ಅಂಬೇಡ್ಕರ್ ವಿದ್ಯಾರ್ಥಿ ಸಂಘ ರಾಯಚೂರು ಸಂಯುಕ್ತಾಶ್ರಯದಲಿ ಆಯೋಜಿಸಿದ್ದ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗೌತಮ ಬುದ್ಧ ಅವರು ಈ ಸಮಾಜಕ್ಕೆ ಶಾಂತಿ, ಅಹಿಂಸೆಯ ಸಂದೇಶ ನೀಡಿದರು. ಬಸವಣ್ಣನವರು ವಚನ ಸಾಹಿತ್ಯದ ಮೂಲಕ ಸಮಾಜ ಸುಧಾರಣೆ ಮಾಡಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚಿಸಿ ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎನ್ನುವ ಸಂದೇಶ ನೀಡಿದರು.

ಈ ಮಹಾನ್ ನಾಯಕರು ನೀಡಿದ ಸಿದ್ಧಾಂತಗಳ ಮೇಲೆ ನಡೆದಾಗ ಮಾತ್ರ ನಾವು ಮನುಷ್ಯರಾಗಲು ಸಾಧ್ಯವಿದೆ. ಇದರಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ನೆಲೆಸಲಿದೆ ಎಂದರು.

ಈ ವೇಳೆ ಕರ್ನಾಟಕ ಪರಿಶಿಷ್ಟ

2ನೇ ಪುಟಕ್ಕೆ

## ಹೆರಿಗೆ ಮಾಡಲು ಸಿಬ್ಬಂದಿ,ಅಧಿಕಾರಿಗಳ ಹಿಂದೇಟು : ಕ್ರಮಕ್ಕೆ ಕರ್ನಾಟಕ ಸೇನೆ ಒತ್ತಾಯ

ಯುವ ಮಾರ್ಗ ಸುದ್ದಿ

**ಅರಕೇರಾ,ಜೂ.10–** ಸಮುದಾಯ ಆರೋಗ್ಯ ಕೇಂದ್ರಕ್ಕೆ ಹೆರಿಗೆಗೆಂದು ಬರುವ ಗರ್ಭಿಣಿಯರಿಗೆ ಸಾಧಾರಣ ಹೆರಿಗೆ ಆಗುವುದಿಲ್ಲಾ ತುರ್ತು ಚಿಕ್ಸಿತೆಯೊಂದಿಗೆ ಹೆರಿಗೆ ಮಾಡಿಸಲು ಜಿಲ್ಲಾ ಆಸ್ಪತ್ರೆಗೆ ತೆರಳಬೇಕೆಂದು ಗರ್ಣಿಯರಿಗೆ ಮತ್ತು ಅವರ ಸಂಭಂದಿಕರಿಗೆ ದಾರಿ ತಪ್ಪಿಸುವ ಕೆಲಸಗಳು ನಡೆಯುತ್ತಿವೆ. ಅದನ್ನು ಸರಿಪಡಿಸಬೇಕೆಂದು ನಮ್ಮ ಕರ್ನಾಟಕ ಸೇನೆ ದೇವದುರ್ಗ ತಾಲೂಕ ಘಟಕ ಭೀಮನಗೌಡ ಎಂ.ಪಾಟೀಲ್ ರಾಜ್ಯ ಸಮಿತಿಯ ಮುಖಂಡರಾದ ಎಂ.ಎಸ್ ವೆಂಕಟೇಶ ಗುತ್ತೇದಾರ ಇವರು ತಹಶೀಲ್ದಾರ ಅಮರೇಶ ಬಿರಾ



ದಾರ ಇವರಿಗೆ ಮನವಿ ಪತ್ರ ನೀಡಿ ಒತ್ತಾ ಯಿಸಿದ್ದಾರೆ. ಅರಕೇರಾ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರು,ಶೂಶ್ರೂಷಕರ, ಹಾಗೂ ಸಿಬ್ಬಂದಿ 2ನೇಪುಟಕ್ಕೆ

## ಮುಂಗಾರು ಸಾಂಸ್ಕೃತಿಕ ರಾಯಚೂರು ಬೆಳ್ಳಿ ಹಬ್ಬ
## ಭಾರದ ಕಲ್ಲು ಎಳೆಯುವ ಸ್ಪರ್ಧೆಗೆ
## ಸಚಿವ ಎನ್‌ಎಸ್‌ಬಿ ಚಾಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.10–**ಮುನ್ನೂರು ಕಾಪು ಸಮಾಜದ ವತಿಯಿಂದ ಆಯೋಜಿಸುವ ಮುನ್ನೂರು ಸಾಂಸ್ಕೃತಿಕ ರಾಯಚೂರು ಬೆಳ್ಳಿ ಹಬ್ಬ ಕಾರ್ಯಕ್ರಮ ಆಯೋಜಿಸುವುದು ಶ್ಲಾಘನೀಯವಾಗಿದೆ. ಈ ಹಬ್ಬ ಕಾರ್ಯಕ್ರಮದಲ್ಲಿ ರೈತಾಪಿ ಕ್ರೀಡೆಗಳಾದ ಭಾರದ ಕಲ್ಲು ಎಳೆಯುವ ಸ್ಪರ್ಧೆ ಆಯೋಜನೆಯಿಂದ ರೈತರ ಉತ್ಸಾಹ ಇಮ್ಮಡಿಗೊಳ್ಳಲಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಎನ್‌ಎಸ್ ಬೋಸರಾಜು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಮುನ್ನೂರು ಕಾಪು ಸಮಾಜ ರಾಯಚೂರು ವತಿಯಿಂದ ಆಚರಿಸಲ್ಪಡುವ ಮುಂಗಾರು ಸಾಂಸ್ಕೃತಿ ಕ ಬೆಳ್ಳಿ ಹಬ್ಬ ಅಂಗವಾಗಿ ಗಂಜ್ ಆವರಣದಲ್ಲಿ ಆಯೋಜಿಸಿದ್ದ ಭಾರದ ಕಲ್ಲು ಎಳೆಯುವ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದರು. ಪ್ರತೀ ವರ್ಷ ಕ್ರೀಡೆ, ಕಲೆ ಮತ್ತು ಸಾಂಸ್ಕೃತಿಕ ಉಳಿವಿಗಾಗಿ ಮುನ್ನೂರು ಕಾಪು ಸಮಾಜ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಿದೆ.

2ನೇ ಪುಟಕ್ಕೆ

## ನಕ್ಕುಂದಿ ಗ್ರಾಮದಲ್ಲಿ 116ನೇ ಮನೆ ಮನೆಗೆ ಅಂಬೇಡ್ಕರ್ ಕಾರ್ಯಕ್ರಮ
# ಸಮಾನತೆಯ ಹಕ್ಕು ಕಲ್ಪಿಸಿಕೊಟ್ಟವರು ಅಂಬೇಡ್ಕರ್: ಆಂಜಿನೇಯ್ಯ ನಾಯಕ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.10–**ಸಂವಿಧಾನ ಜಾರಿ ಪೂರ್ವ ಭಾರತ ದೇಶದಲ್ಲಿ ಅಸಮಾನತೆ ತಾಂಡವಾಡುತ್ತಿತ್ತು. ದಲಿತರಿಗೆ, ಮಹಿಳೆಯರಿಗೆ, ಎಲ್ಲಾ ಜಾತಿಯ ಬಡವರಿಗೂ ಸೇರಿದಂತೆ ಸರ್ವರಿಗೂ ಸಮಾನತೆಯಿಂದ ಬದುಕುವಂತಹ ಸಮಾನವಾದ ಅವಕಾಶಗಳು ಮತ್ತು ಸಮಾನತೆಯ ಹಕ್ಕುಗಳನ್ನು ಸಂವಿಧಾನಬದ್ಧವಾಗಿ ಕಲ್ಪಿಸಿಕೊಟ್ಟವರು ಡಾ.ಬಾಬಾಸಾಹೇಬ್ ಅಂಬೇಡ್ಕರ್ ಎಂದು ಮಾನವಿ ತಾಲೂಕ ಖಾಸಗಿ ಕಾಲೇಜು ಉಪನ್ಯಾಸಕರ ಸಂಘದ ಅಧ್ಯಕ್ಷ ಆಂಜಿನೇಯ್ಯ ನಸಲಾಪೂರ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲೂಕಿನ ನಕ್ಕುಂದಿ ಗ್ರಾಮದ ಬಸಲಿಂಗಮ್ಮ – ಮೌನೇಶ ಇವರ ಮನೆಯಲ್ಲಿ ಬಹುಜನ ಸಂಘರ್ಷ ಸಮಿತಿಯಿಂದ ಸೋಮವಾರ ಆಯೋಜಿಸಿದ್ದ, 116ನೇ ಮನೆ–ಮನೆಗೆ ಅಂಬೇಡ್ಕರ್ ಕಾರ್ಯ



ಕ್ರಮದಲ್ಲಿ ಮುಖ್ಯಭಾಷಣಕಾರರಾಗಿ ಮಾತನಾಡಿದರು. ಬಾಬಾಸಾಹೇಬ್ ಅಂಬೇಡ್ಕರ್ ರವರ ಹೋರಾಟದ ಪ್ರತಿಫಲದಿಂದ ಓಟಿನ ಹಕ್ಕು ದೊರಕಿಸಿ ಕೊಟ್ಟಿದ್ದಾರೆ. ಓಟು ಸರ್ವಸಮಸ್ಯೆಗಳ ಪರಿಹಾರದ ಅಸ್ತ್ರವಾಗಿದೆ. ಇದನ್ನು ಬಳಸುವಲ್ಲಿ ಅನಕ್ಷರಸ್ಥರಿಗಿಂತ ಅಕ್ಷರಸ್ಥರೇ ದಾರಿ ತಪ್ಪುತ್ತಿದ್ದಾರೆ ಎಂದು ಕಳವಳಪಟ್ಟರು.

ಕವಿಗಳು ಮತ್ತು ಉಪನ್ಯಾಸಕರಾದ ಉಮರ್ ದೇವರಮನಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶೋಷಿತ, ಅವಕಾಶ ವಂಚಿತ ಸಮುದಾಯಗಳಿಗೆ ಅಂಬೇಡ್ಕರ್ ರವರೇ ನ್ಯಾಯ ನೀಡುವ ಅಸ್ತ್ರವಾಗಿದ್ದಾರೆ. ಅಂಬೇಡ್ಕರ್ ಅಂದರೇನೆ ಇತಿಹಾಸ. ಅವರು ಪ್ರತಿಯೊಬ್ಬರಿಗೂ ನ್ಯಾಯ ದೊರಕಿಸಿಕೊಟ್ಟ ಮಹಾನ್ ಮಾನವತಾವಾದಿ ಎಂದರು.

2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ದಯಾನಂದ ಅಮಾನತು ಆದೇಶ ಹಿಂಪಡೆಯಲು ವಾಲ್ಮೀಕಿ ನಾಯಕ ಮಹಾಸಭಾದಿಂದ ಮನವಿ

ಪ್ರತಿಭಟನೆಯಲ್ಲಿ ಬಸವರಾಜ ನಾಯಕ, ವೀರೇಶನಾಯಕ, ಶ್ರೀರಾಮ ನಾಯಕ, ಜಲ್ಲಿ ಆಂಜನೇಯ್ಯನಾಯಕ, ಬಿ. ಶಿವರಾಜ ನಾಯಕ, ಭೀಮಣ್ಣನಾಯಕ, ಶರಣಬಸವ ನಾಯಕ, ಸುದೀಪ್ ನಾಯಕ, ಚನ್ನಬಸವನಾಯಕ, ಲಿಂಗಪ್ಪ ಕರೆಗುಡ್ಡ, ವೀರೇಶನಾಯಕ, ಗುರುರಾಜ ನಾಯಕ, ಆಂಜಿ ನಾಯಕ, ಸಾಗರ, ಮಂಜುನಾಥನಾಯಕ, ಅಂಬಣ್ಣ ನಾಯಕ, ದೇವರಾಜು, ಕೃಷ್ಣನಾಯಕ, ಸುಬ್ಬನಾಯಕ, ರಾಮು ನಾಯಕ, ಮಹೇಂದ್ರನಾಯಕ, ವೆಂಕಟೇಶ ನಾಯಕ ಅರೋಲಿ,ಆಂಜನೇಯ್ಯನಾಯಕ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಬುದ್ಧ, ಬಸವ, ಅಂಬೇಡ್ಕರ್ ಜಾಗತಿಕ ಮಟ್ಟದ ಮಹಾನ್ ನಾಯಕರು:ಎನ್‌ಎಸ್‌ಬಿ

ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಬುದ್ಧ, ಬಸವ, ಅಂಬೇಡ್ಕರ್ ಅವರು ಶೋಷಣೆಗೆ ಒಳಗಾದ ಸಮುದಾಯಗಳನ್ನು ಮೇಲೆತ್ತಿದರು. ಮನುಷ್ಯರನ್ನು ಮನುಷ್ಯರಂತೆ ಕಾಣುವ ಸಂದೇಶ ನೀಡಿದರು ಎಂದು ತಿಳಿಸಿದರು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಎ.ವಸಂತ ಕುಮಾರ ಅವರು ಮಾತನಾಡಿ, ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರು ಬೇರೆ ಬೇರೆ ಕಾಲಘಟ್ಟದಲ್ಲಿ ಜನಿಸಿದರು ಅವರು ನೀಡಿರ ಸಮತಾ ಸಮಾಜದ ಸಂದೇಶ ಮಹತ್ವದ್ದಾಗಿದೆ ಎಂದರು.

ಈ ವೇಳೆ ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಅವರು ಮಾತನಾಡಿ, ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ಆದರ್ಶ, ಜೀವನ ಮೌಲ್ಯಗಳನ್ನು ಇಂದಿನ ಯುವ ಸಮೂಹ ನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ನಡೆ-ನುಡಿ ಒಂದೇ ಇರಬೇಕು. ಮೌಢ್ಯ ತೊಲಗಬೇಕು. ದೇವರ ಹೆಸರಿನಲ್ಲಿ ಮೋಸ ನಡೆಯುವುದು ನಿಲ್ಲಬೇಕು ಎಂಬುದಾಗಿ ಬಸವಣ್ಣನವರು ತಿಳಿಸಿದರು.

ಅವಮಾನ ಹಸಿವಿಗಿಂತ ಘೋರ. ಜಾತಿಯ ಕಾರಣಕ್ಕೆ ಅವಮಾನ ಎದುರಿಸುವುದು ನಿಲ್ಲಬೇಕು. ಜಾತಿಯಲ್ಲಿ ಮೇಲು ಕೀಳು ಎಂಬುದು ಇರಬಾರದು ಎಂದು ಡಾ.ಬಿ.ಆರ್.ಅಂಬೇಡ್ಕರ್ ಅವರು ತಿಳಿಸಿದರು ಎಂದರು. ಸಂವಿಧಾನವನ್ನು ಪೂರ್ತಿಯಾಗಿ ಓದಿದಾಗಲೇ ಅದರ ಮಹತ್ವ ತಿಳಿಯುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ಕೃಷಿ ವಿವಿಯ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ, ಕುಲ ಸಚಿವರಾದ ಡಾ.ಕೆ.ಆರ್.ದುರುಗೇಶ್, ಸ್ನಾತಕೋತ್ತರ ವಿಭಾಗದ ಡೀನ್ ಡಾ.ಗುರುರಾಜ್ ಸುಂಕದ ಹಾಗೂ ವಿವಿಯ ವ್ಯವಸ್ಥಾಪನಾ ಮಂಡಳಿ ಸದಸ್ಯರು ಸೇರಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನಿರ್ದೇಶನಾಲಯ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ನೌಕರರ ಸಂಘದ ಹಾಗೂ ಡಾ.ಬಿ.ಆರ್ ಅಂಬೇಡ್ಕರ್ ವಿದ್ಯಾರ್ಥಿ ಸಂಘದ ವಿವಿಧ ಪದಾಧಿಕಾರಿಗಳು, ವಿವಿಯ ವಿವಿಧ ವಿಭಾಗಗಳ ಮುಖ್ಯಸ್ಥರು, ವಿದ್ಯಾರ್ಥಿಗಳು ಇದ್ದರು.

# ಹೆರಿಗೆಗೆ ಮಾಡಲು ಸಿಬ್ಬಂದಿ,ಅಧಿಕಾರಿಗಳ ಹಿಂದೇಟು : ಕ್ರಮಕ್ಕೆ ಕರ್ನಾಟಕ ಸೇನೆ ಒತ್ತಾಯ

ನಿರ್ಲಕ್ಷ್ಯದಿಂದ ಹೆರಿಗೆ ಪ್ರಮಾಣ ಕುಸಿದಿದೆ. ಆರೋಗ್ಯವಂತ ಗರ್ಭಿಣಿಯರನ್ನು ಹೆರಿಗೆ ಮಾಡದೇ ಸುಖಾಸುಮ್ಮನೆ ಆತಂಕ ಮೂಡಿಸುವ ಪ್ರಕರಣಗಳು ನಡೆಯುತ್ತಿವೆ.ಸಮುದಾಯ ಆರೋಗ್ಯ ಕೇಂದ್ರಕ್ಕೆ ಸುಮಾರು

50 ಕ್ಕೂಹೆಚ್ಚು ಹಳ್ಳಿ,ದೊಡ್ಡಿ,ತಾಂಡಗಳು ಒಳಪಡುತ್ತವೆ. ಅತೀದೊಡ್ಡ ಆರೋಗ್ಯ ಕೇಂದ್ರವಾಗಿದ್ದು,ಸುಸಜ್ಜಿತ ಕಟ್ಟಡ,ಮೂಲ ಸೌಲಭ್ಯಗಳನ್ನುಹೊಂದಿದೆ. ಆದರೆ ಆಸ್ಪತ್ರೆಯಲ್ಲಿ ಸುಸೂತ್ರವಾಗಿ ಹೆರಿಗೆಗಳು ನಡೆಯುತ್ತಿಲ್ಲ.

ವರ್ಷದ ಹಿಂದೆಗೆ ಹೋಲಿಸಿದರೆ ಹೆರಿಗೆ ಪ್ರಮಾಣ ಕುಸಿತ ಕಂಡಿದೆ.ಸಿಬ್ಬಂದಿಗಳು ತರೆಹೇವಾರಿ ಸಬೂಬು ಹೇಳಿ ಜಿಲ್ಲಾ ಆಸ್ಪತ್ರೆಗೆ ರವಾನಿಸಿಸುವ ಪ್ರಕರಣಗಳು ನಡೆಯುತ್ತಿವೆ.ಒಂದೆರಡು ಹೆರಿಗೆ ಮಾಡಿಸಿಕೊಂಡ ಆರೋಗ್ಯವಂತ ಗರ್ಭಿಣಿ ಬಾಣಂತಿಯರಿಗೂ ಹಲವು ಕಾರಣ ಹೇಳಿ ಆತಂಕ ಮೂಡಿಸುತ್ತಿದ್ದಾರೆ,ರಕ್ತದೊತ್ತಡ,ಶುಗರ್ ಲೇವಲ್ ಶಕ್ತಿಹೀನತೆ ಸೇರಿ ಹಲವು ದೌರ್ಭಲ್ಯಗಳ ನೆಪವೊಡ್ಡಿ ಜಿಲ್ಲಾ ಆಸ್ಪತ್ರೆಗೆ ಕಳಿಸಿಕೈತೊಳೆದುಕೊಳ್ಳುತ್ತಿದ್ದಾರೆ.

ಪಟ್ಟಣದಲ್ಲಿ ಯಾವುದೇ ನರರ್ಸಿಂಗ ಹೋಮ್ ಗಳಿಲ್ಲದಿರುವದರಿಂದ ನಗರ ಪ್ರದೇಶಗಳಿಗೆ ಹೋಗುವದು ಗರ್ಭಿಣಿಯರಿಗೆ ಅನಿವಾರ್ಯವಾಗಿದೆ. ಸೂಸೂತ್ರ ಹೆರಿಗೆ ಮಾಡಿಸಲು ಬೇಕಾದ ಎಲ್ಲಾ ಸೌಲಭ್ಯಗಲಿದ್ದರೂ ಸಿಬ್ಬಂದಿ ತಲೆಕೆಸಿಕೊಳ್ಳುತ್ತಿಲ್ಲ .ಬಡವರ್ಗದವರಿಗೂ ಸರಕಾರಿ ಆಸ್ಪತ್ರೆ ಹೊರೆಯಾಗಿದೆ.ಕಳೆದ ಎರಡುಮೂರುವರ್ಷಗಳ ಹಿಂದೆ ಒಂದು ತಿಂಗಳಿಗೆ 100ರಿಂದ 120 ಹೆರಿಗೆ ಮಾಡುತ್ತಿದ್ದ ಆಸ್ಪತ್ರೆಯಲ್ಲಿ ಪ್ರಸುತ್ತ ಈಗ ತಿಂಗಳಿಗೆ 30 ಆಸುಪಾಸು ಹೆರಿಗೆಗಳು ನಡೆಯುತ್ತಿವೆ. ಇದರಿಂದ ಬಡ ಗರ್ಬಿಣಿಯರು ಸರಕಾರದ ಹೆರಿಗೆ ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ.ಆದಕಾರಣ ಹೆಚ್ಚಿನ ಪ್ರಮಾನದಲ್ಲಿ ಸುರಕ್ಷೀತ ಹೆರಿಗೆಗಳನ್ನು ಮಾಡಿಸಲು ಜಾಗೃತಿ ಮೂಡಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ಮನವಿಮಾಡಿಕೊಂಡಿದ್ದಾರೆ. ಸಂದರ್ಬದಲಿ ನಮ್ಮ ಕರ್ನಾಟಕ ಸೇನೆ ದೇವದುರ್ಗ ತಾಲೂಕ ಘಟಕ ಭೀಮನಗೌಡ ಎಂ ಪಾಟೀಲ್ .ರಾಜ್ಯ ಸಮಿತಿಯ ಮುಖಂಡರಾದ ಎಂ ಎಸ್ ವೆಂಕಟೇಶ ಗುತ್ತೇದಾರ .ಉಪಾಧ್ಯಕ್ಷರಾದ ಉಸ್ಮಾನಪಾಶ ,ಜಗನಾಥ ಮಲ್ಲಾಪೂರು ,ಬಸವರಾಜ ಅರಕೇರಾ ಉಪಸ್ಥಿತರಿದ್ದರು.

# ಸಮಾನತೆಯ ಹಕ್ಕು ಕಲ್ಪಿಸಿಕೊಟ್ಟವರು ಅಂಬೇಡ್ಕರ್: ಆಂಜಿನೇಯ್ಯ ನಾಯಕ

ಪ್ರಾಸ್ತಾವಿಕವಾಗಿ ಬಹುಜನ ಸಂಘರ್ಷ ಸಮಿತಿ ಸಂಸ್ಥಾಪಕ ಅಧ್ಯಕ್ಷ ಜೆ.ಶರಣಪ್ಪ ಬಲ್ಲಟಗಿ, ಗ್ರಂಥಾಪಾಲಕ ಹನುಮಂತ್ರಾಯ ದೊರೆ ನಕ್ಕುಂದಿ ಮಾತನಾಡಿದರು.

ಸಾಮಾಜಿಕ ಕಾರ್ಯಕರ್ತ ಹಾಗೂ ಯುವ ದಲಿತ ಮುಖಂಡ ಮೌನೇಶ ನಕ್ಕುಂದಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ದಲಿತ ಸಂಘರ್ಷ ಸಮಿತಿ ಯುವನಾಯಕ ಜಗದೀಶ ಸಾಲ್ಮನಿ ಬಾಗಲವಾಡ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ನಕ್ಕುಂದಿ ಗ್ರಾಮ ಪಂಚಾಯತಿ ಅಧ್ಯಕ್ಷ ಈರಮ್ಮ ಹನುಮಯ್ಯ ನಕ್ಕುಂದಿ, ದಸಂಸ ಜಿಲ್ಲಾ ಸಂಚಾಲಕ ಗಂಗಾಧರ ಹಿಂದಿನಮನೆ ಬಾಗಲವಾಡ, ಮಾನವಿ ಬಹುಜನ ಸಂಘರ್ಷ ಸಮಿತಿ ತಾಲೂಕಾಧ್ಯಕ್ಷ ಯಮುನಪ್ಪ ಜಾಗೀರಪನ್ನೂರು, ದಸಂಸ ಮುಖಂಡ ಮೌನೇಶ್ ಕೋರಿ ಬಾಗಲವಾಡ, ಶಿವರಾಜ ಮರಾಠ, ನಕ್ಕುಂದಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವೀರೇಶ ನಕ್ಕುಂದಿ,ನಕ್ಕುಂದಿ ಗ್ರಾಮ ಪಂಚಾಯತಿ ಸದಸ್ಯ ಯಂಕಪ್ಪ ನಕ್ಕುಂದಿ, ಹನುಮಯ್ಯ ನಕ್ಕುಂದಿ, ಕಂತಮ್ಮ ನಕ್ಕುಂದಿ, ದುರ್ಗಮ್ಮ, ಲಕ್ಷ್ಮಿ ಕುಟುಂಬಸ್ಥರು ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು

# ವೈಜ್ಞಾನಿಕ ಹೈನುಗಾರಿಕೆಯಿಂದ ಮಾತ್ರ ರೈತರಿಗೆ ಅಧಿಕ ಲಾಭ: ಡಾ. ಮಲ್ಲರೆಡ್ಡಿ

ದಾವುಗಳನ್ನು ಬೆಳೆಸಿ ರಾಸುಗಳಿಗೆ ನೀಡುವುದರಿಂದ ಹೆಚ್ಚಿನ ಹಾಲಿನ ಇಳುವರಿಯನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ. ಹಾಗೂ ರೈತರು ತಮ್ಮ ಹಾಲು ಹಾಗೂ ಹಾಲಿನ ಉತ್ಪನ್ನಗಳಿಗೆ ಮಾರುಕಟ್ಟೆಯನ್ನು ರೂಪಿಸಿಕೊ ಳ್ಳುವುದರಿಂದ ಹೆಚ್ಚಿನ ಅದಾಯವನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಬೆಂಗಳೂರಿನ ಭಾರತೀಯ ಪಶು ಸಂಗೋಪನೆ ಸಂಶೋಧನಾ ಸಂಸ್ಥೆಯ ಡಾ. ವಿಶ್ವಾಸ್ ಜಾನುವಾರುಗಳಿಗೆ ಬಾಧಿಸುವ ಕಾಲುಬಾಯಿ ರೋಗ, ಬ್ರುಸೆಲ್ಲೋಸಿಸ್ ರೋಗ, ಚಿಪ್ಪೆ ಮತ್ತು ಕೆಚ್ಚಲು ಬಾವು, ಇತ್ತೀಚ್ಚಿಗೆ ಕಾಣಿಸಿಕೊಂಡ ಚರ್ಮ ಗಂಟು ರೋಗಗಳ ಲಕ್ಷಣಗಳು, ನಿರ್ವಹಣಾ ಕ್ರಮಗಳು ಮತ್ತು ಲಸಿಕೆಗಳ ಬಗ್ಗೆ ಮಾಹಿತಿ ನೀಡಿದರು. ರಾಷ್ಟ್ರೀಯ ಹೈನುಗಾರಿಕೆ ಸಂಶೋಧನಾ ಸಂಸ್ಥೆ ಬೆಂಗಳೂರಿನ ಡಾ. ಸುಭಾಶ್, ಡಾ. ಉಮೇಶಬಾಬು ಬಿ.ಎಸ್. ಶಿವಪ್ಪ, ಗ್ರಾಮದ ರೈತರು ಇದ್ದರು. ಕೃಷಿ ವಿಜ್ಞಾನಿಗಳ ತಂಡದಿಂದ, ಗವಿಗಟ್ ಮತ್ತು ಮಲದಕಲ್ ಗ್ರಾಮಗಳಲ್ಲಿನ ರೈತರನ್ನು ಭೇಟಿ ಮಾಡಿ ಸಂವಾದ ನಡೆಸಿದರು.

# ರಾಜ್ಯದಲ್ಲಿ ಮತ್ತಷ್ಟು ಹೆಚ್ಚಾಗಲಿದೆ ಮಳೆ

**ಬೆಂಗಳೂರು, ಜೂ.10–** ರಾಜ್ಯದಲ್ಲಿ ಮತ್ತೆ ಮುಂಗಾರು ಚುರುಕುಗೊಂಡಿದ್ದು, ಚದುರಿದಂತೆ ಮಳೆ ಮಳೆಯಾಗಿದೆ. ಭಾನುವಾರದವರೆಗೂ ಮಳೆ ಮುಂದುವರೆಯುವ ಮುನ್ಸೂಚನೆಗಳಿದ್ದು, ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗುವ ಸಾಧ್ಯತೆಗಳಿವೆ.



ಕಳೆದ ಮೂರು-ನಾಲ್ಕು ದಿನಗಳಿಂದ ಮಳೆ ರಾಜ್ಯದಲ್ಲಿ ಆರಂಭವಾಗಿದ್ದು, ದಿನದಿಂದ ದಿನಕ್ಕೆ ಮಳೆ ಪ್ರಮಾಣ ಹೆಚ್ಚಾಗಲಿದೆ. ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಮೇಲ್ಮೈ ಸುಳಿಗಾಳಿ ಹಾಗೂ ಒಳನಾಡಿನಲ್ಲಿರುವ ಟ್ರಫ್‌ನ ಪ್ರಭಾವದಿಂದ ಭಾಗಶಃ ಮೋಡ ಕವಿದ ವಾತಾವರಣವಿದ್ದು, ಸಂಜೆ ಹಾಗೂ ರಾತ್ರಿ ವೇಳೆ ಮಳೆಯಾಗುತ್ತಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ನಿನ್ನೆ ಉಡುಪಿ ಜಿಲ್ಲೆಯಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ. ಧಾರವಾಡ ತಾಲ್ಲೂಕಿನ ನವಲಗುಂದದಲ್ಲಿ 118.2 ಮಿ.ಮೀ.ನಷ್ಟು ಭಾರಿ ಮಳೆಯಾಗಿದೆ. ಬೀದರ್, ದಾವಣಗೆರೆ, ಕಲಬುರಗಿ, ದಕ್ಷಿಣ ಕನ್ನಡ, ಬೆಂಗಳೂರು ನಗರ ಜಿಲ್ಲೆಗಳಲ್ಲಿ ಸಾಧಾರಣ ವ್ಯಾಪಕ ಪ್ರಮಾಣದ ಮಳೆಯಾಗಿದೆ.ತುಮಕೂರು, ಮಂಡ್ಯ, ರಾಮನಗರ, ಗದಗ, ಬೆಂಗಳೂರು ಗ್ರಾಮಾಂತರ, ಉತ್ತರ ಕನ್ನಡ, ಚಿಕ್ಕಬಳ್ಳಾಪುರ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಮಳೆಯಾಗಿದೆ. ಧಾರವಾಡ ಬೆಳಗಾವಿ, ಶಿವಮೊಗ್ಗ, ರಾಯಚೂರು, ಹಾವೇರಿ, ವಿಜಯನಗರ, ಕೋಲಾರ, ವಿಜಯಪುರ, ಕೊಡಗು, ಯಾದಗಿರಿ, ಮೈಸೂರು, ಬಾಗಲಕೋಟೆ, ಬಳ್ಳಾರಿ, ಚಿಕ್ಕಮಗಳೂರು, ಕೊಪ್ಪಳ, ಚಾಮರಾಜನಗರ, ಹಾಸನ ಜಿಲ್ಲೆಗಳ ಕೆಲವೆಡೆ ಮಾತ್ರ ಮಳೆಯಾಗಿದೆ.

ಹವಾಮಾನ ಮುನ್ಸೂಚನೆ ಪ್ರಕಾರ ರಾಜ್ಯದಲ್ಲಿ ಸಾಮಾನ್ಯ ಮುಂಗಾರು ಮುಂದುವರೆಯಲಿದೆ. ಇಂದಿನಿಂದ ಮಳೆಯ ಪ್ರಮಾಣ ಮತ್ತಷ್ಟು ಹೆಚ್ಚಾಗಲಿದೆ. ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗುವ ಸಾಧ್ಯತೆಗಳಿವೆ. ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ, ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ. ರಾಜ್ಯದ ಪೂರ್ವಭಾಗದ ಜಿಲ್ಲೆಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗಲಿದೆ.

ಗುರುವಾರದಿಂದ ಮಳೆ ಪ್ರಮಾಣ ಹೆಚ್ಚಾಗಲಿದ್ದು, ಕೆಲವೆಡೆ ಭಾರಿ ಮಳೆಯಾಗುವ ಲಕ್ಷಣಗಳು ಕಂಡುಬರುತ್ತಿವೆ. ಮುಂದಿನ ಭಾನುವಾರದವರೆಗೂ ರಾಜ್ಯದಲ್ಲಿ ಹೆಚ್ಚಿನ ಮಳೆಯಾಗುವ ಮುನ್ಸೂಚನೆಗಳಿವೆ.

# ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ರಾಯಚೂರು,ಜೂ.10–** ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಅರ್ಹ ಅಭ್ಯರ್ಥಿಗಳಿಂದ ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗಳು: ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಸಹಾಯಧನ ಮತ್ತು ಸಾಲ-ಸೌಲಭ್ಯ ನೀಡಲಾಗುವುದು.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.


ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಲ್ಲದೆ 2023-24 ಮತ್ತು 2024-25ನೇ ಸಾಲಿನಲ್ಲಿ ಅರ್ಜಿಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಆಸಕ್ತರ ಹಿಂದುಳಿದ ವರ್ಗಗಳ ಪ್ರವರ್ಗ-2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ವಿಳಾಸ: http://sevasindhu.karnataka.gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.

**ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ವಿಳಾಸ:** www.kmmd.karnataka.gov.in ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 080-22374832, 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 08532-250440ಗೆ ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಪುಟ ಪುನರ್ ರಚನೆ ಬಗ್ಗೆ ಸದ್ಯಕ್ಕೆ ಯಾವುದೇ ಚರ್ಚೆಗಳಿಲ್ಲ

**ನವದೆಹಲಿ,ಜೂ.10–** ಸಚಿವ ಸಂಪುಟ ಪುನರ್ ರಚನೆ ಬಗ್ಗೆ ಸದ್ಯಕ್ಕೆ ಯಾವುದೇ ಚರ್ಚೆಗಳಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಕೆಲ ವಿಚಾರಗಳನ್ನು ಚರ್ಚೆ ನಡೆಸಲಿದ್ದಾರೆ. ಅದರಲ್ಲಿ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆಯಾಗುವ ಕುರಿತು ತಮಗೆ ಮಾಹಿತಿ ಇಲ್ಲ ಎಂದರು.



ತಮ್ಮದು ದಿಢೀರ್ ಪ್ರವಾಸ ಅಲ್ಲ. ಕೇಂದ್ರ ಸಚಿವರನ್ನು ಭೇಟಿಯಾಗುವುದು ಪೂರ್ವ ನಿರ್ಧರಿತ ವೇಳಾಪಟ್ಟಿ ಇತ್ತು. ಮುಖ್ಯಮಂತ್ರಿ, ಉಪಮುಖ್ಯಮಂತ್ರಿಯವರು ಹೈಕಮಾಂಡ್ ಅನ್ನು ಭೇಟಿಯಾಗಲು ಆಗಮಿಸಿದ್ದಾರೆ ಎಂದರು.

ಕಾಲ್ತುಳಿತದಂತಹ ಗಂಭೀರ ಪ್ರಕರಣಗಳು ನಡೆದಾಗ ಹೈಕಮಾಂಡ್‌ಗೆ ವಿವರಣೆ ನೀಡುವುದು ಸರ್ಕಾರದ ಕರ್ತವ್ಯ. ಹೀಗಾಗಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಬಂದಿದ್ದಾರೆ. ಅವರಿಬ್ಬರೂ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತಾರೆ. ತಾವು ಹೋಗುವುದಿಲ್ಲ ಎಂದರು.

ಕಾಲ್ತುಳಿತ ಪ್ರಕರಣದಲ್ಲಿ ಯಾರ ವೈಫಲ್ಯ ಹಾಗೂ ತಪ್ಪಿತಸ್ಥರು ಯಾರು ಎಂಬುದನ್ನು ತನಿಖಾ ವರದಿ ಬಳಿಕ ನಿರ್ಧರಿಸಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು. 15 ದಿನ ಅಥವಾ ಒಂದು ತಿಂಗಳ ಒಳಗಾಗಿ ತನಿಖೆಯ ವರದಿ ಸರ್ಕಾರದ ಕೈಸೇರುವ ನಿರೀಕ್ಷೆ ಇದೆ. ಈ ಘಟನೆ ಬಗ್ಗೆ ಹೊಂದಾಣಿಕೆ ಕೊರತೆ ಇದೆ ಎಂಬುದು ಸರಿಯಲ್ಲ. ಘಟನೆಯಂತೂ ಆಗಿದೆ. ಅದನ್ನು ಸರಿಪಡಿಸುವತ್ತ ಗಮನ ಹರಿಸುತ್ತಿದ್ದಾರೆ ಎಂದರು.

# ಭಾರದ ಕಲ್ಲು ಎಳೆಯುವ ಸ್ಪರ್ಧೆಗೆ ಸಚಿವ ಎನ್‌ಎಸ್‌ಬಿ ಚಾಲನೆ

ಸಮಾಜದಲ್ಲಿರುವ ಎಲ್ಲಾ ಸಮುದಾಯಗಳ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಬಲವರ್ಧನೆಯಾಗಬೇಕಾದರೆ ನಮ್ಮೆಲ್ಲರಲ್ಲಿ ಒಗ್ಗಟ್ಟು ಅಗತ್ಯ. ನಾವೆಲ್ಲರು ಒಗ್ಗಟ್ಟಾಗಿ ದೇಶದ ಬೆನ್ನೆಲುಬಾದ ರೈತರೊಂದಿಕೆ ಕೈಜೋಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸೋಮವಾರ ಪೇಠೆ ಹಿರೇಮಠದ ಶ್ರೀಗಳಾದ ಅಭಿನವ ರಾಚೋಟಿ ಶಿವಾಚಾರ್ಯ ಮಹಾ ಸ್ವಾಮಿಗಳು, ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್, ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡರು, ಮಾಜಿ ಶಾಸಕರಾದ ಎ ಪಾಪರಡ್ಡಿ, ಮಹಾನಗರ ಪಾಲಿಕೆ ಮಾಹಾ ಪೌರರಾದ ನರಸಮ್ಮ ನರಸಿಂಹಲು, ಎಪಿಎಂಸಿ ಅದ್ಯಕ್ಷರಾದ ಮಲ್ಲಿಕಾರ್ಜುನ್, ಕಾಂಗ್ರೆಸ್ ಮುಖಂಡರಾದ ಕೆ ಶಾಂತಪ್ಪ, ಜಿ ಶಿವಮೂರ್ತಿ

ಗೋವಿಂದರಡ್ಡಿ, ಪ್ರತಾಪ್ ರಡ್ಡಿ, ಸೇರಿದಂತೆ ಅನೇಕರಿದ್ದರು.

# ಅರ್‌ಸಿಬಿ ಸಂಭ್ರಮಾಚರಣೆ ಕಾಲ್ತುಳಿತ ದುರಂತ ವಿಚಾರಣೆ ಜೂ.12ಕ್ಕೆ ಮುಂದೂಡಿಕೆ

**ಬೆಂಗಳೂರು,ಜೂ.10–** ಚಿನ್ನಸ್ವಾಮಿ ಕ್ರಿಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ 11 ಜನರು ಸಾವನ್ನಪ್ಪಿದ ಘಟನೆ ಕುರಿತ ಅರ್ಜಿ ವಿಚಾರಣೆಯನ್ನು ಉಚ್ಚ ನ್ಯಾಯಾಲಯ ಜೂ.12ಕ್ಕೆ ಮುಂದೂಡಿದೆ. ಜೂ. 12ರೊಳಗೆ ಮುಚ್ಚಿದ ಲಕೋಟೆಯಲ್ಲಿ ಉತ್ತರ ನೀಡುವಂತೆ ಅಡ್ವೋಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ ಅವರಿಗೆ ನ್ಯಾಯಾಲಯ ಸೂಚನೆ ನೀಡಿದೆ.

ಘಟನೆ ಕುರಿತಂತೆ ಸ್ವಯಂ ಪ್ರೇರಣೆ ಪಿಐಎಲ್ ದಾಖಲಿಸಿಕೊಂಡಿದ್ದ ನ್ಯಾಯಲಯ ಮುಂದಿನ ವಿಚಾರಣೆಯನ್ನು ಇಂದಿಗೆ ಮುಂದೂಡಿತ್ತು. ಆದರೆ, ಇಂದು ನ್ಯಾಯಲಯದ ಮುಂದೆ ಹಾಜರಾದ ಎಜಿ ಶೆಟ್ಟಿ ಅವರು ಇನ್ನೂ ತಮ್ಮ ಉತ್ತರವನ್ನು ಸಲ್ಲಿಸಲು ಸಾಧ್ಯವಾಗಿಲ್ಲ ಎನ್ನುವುದನ್ನು ನ್ಯಾಯಪೀಠದ ಗಮನಕ್ಕೆ ತಂದರು. ಘಟನೆ ಕುರಿತಂತೆ ವರದಿ ಸಲ್ಲಿಸುವಂತೆ ನ್ಯಾಯಾಂಗ ಆಯೋಗವನ್ನು ರಚಿಸಲಾಗಿದೆ ಜೊತೆಗೆ ಒಂದು ತಿಂಗಳ ಗಡುವು ನೀಡಲಾಗಿದೆ. ನಗರ ಪೊಲೀಸ್ ಆಯುಕ್ತರು ಸೇರಿದಂತೆ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ ಎಂದು ಅವರು ತಿಳಿಸಿದರು.ಬಾಕಿ



ಇರುವ ಜಾಮೀನು ಅರ್ಜಿಗಳನ್ನು ಏಕಕಾಲದಲ್ಲಿ ವಿಚಾರಣೆಗೆ ಒಳಪಡಿಸಲಾಗುತ್ತಿದ್ದು, ಪ್ರಕರಣದಲ್ಲಿ ಮಾಡಿದ ಯಾವುದೇ ಹೇಳಿಕೆಗಳನ್ನು ಆರೋಪಿಗಳು ಬಳಸುತ್ತಿದ್ದಾರೆ ಎಂದು ಹೇಳುವ ಮೂಲಕ ಶೆಟ್ಟಿ ಸೀಲ್ ಮಾಡಿದ ಲಕೋಟೆ ಸಲ್ಲಿಕೆಯನ್ನು ಕೋರಿದರು.

ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ ಕಾಮೇಶ್ವರ ರಾವ್ ಮತ್ತು ನ್ಯಾಯಮೂರ್ತಿ ಸಿ ಎಂ ಜೋಶಿ ಅವರು ಸ್ವಯಂಪ್ರೇರಿತ ಅರ್ಜಿಯನ್ನು ಆಲಿಸಿದರು.ವಿಧಾನ ಪರಿಷತ್ತಿನ ಮಾಜಿ ಸದಸ್ಯರೊಬ್ಬರು ಅರ್ಜಿಯಲ್ಲಿ ತಮ್ಮನ್ನು ಒಳಗೊಳ್ಳುವಂತೆ ಕೋರಿಕೆ ಸಲ್ಲಿಸಿದ್ದಾರೆ.ಏತನ್ಮಧ್ಯೆ, ಕಾಲ್ತುಳಿತದ ಕುರಿತು ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ಸಲ್ಲಿಸುತ್ತಿರುವುದಾಗಿ ವಕೀಲರೊಬ್ಬರು ತಿಳಿಸಿದ್ದಾರೆ.ಜೂನ್ 5 ರಂದು ಕರ್ನಾಟಕ ಹೈಕೋರ್ಟ್ ಕ್ರಿಡಾಂಗಣದ ಕಾಲ್ತುಳಿತದ ಘಟನೆಯನ್ನು ಸ್ವಯಂಪ್ರೇರಿತವಾಗಿ ಸ್ವಿಕರಿಸಿ, ರಾಜ್ಯ ಸರ್ಕಾರಕ್ಕೆ ನೋಟೀಸ್ ಜಾರಿ ಮಾಡಿತ್ತು.

# ಕಾಂಗ್ರೆಸ್ ಹೈಕಮಾಂಡ್ ಅಲ್ಲ ಖಾಲಿ ಕಮಾಂಡ್ : ಅಶೋಕ್ ವ್ಯಂಗ್ಯ

**ಬೆಂಗಳೂರು,ಜೂ.10–** ಚಿನ್ನಸ್ವಾಮಿ ಕ್ರಿಡಾಂಗಣದಲ್ಲಿ ನಡೆದ ಆರ್‌ಸಿಬಿ ಕಾಲ್ತುಳಿತ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ರಾಜೀನಾಮೆ ಪಡೆಯದಿದ್ದರೆ ಕಾಂಗ್ರೆಸ್ ಹೈಕಮಾಂಡ್ ಖಾಲಿ ಕಮಾಂಡ್ ಆಗುತ್ತದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಕೆ ಕೊಟ್ಟಿದ್ದಾರೆ.

ಇತ್ತಿಚೆಗೆ ಚಿನ್ನಸ್ವಾಮಿ ಕ್ರಿಡಾಂಗಣ ಬಳಿ ಕಾಲ್ತುಳಿತದಲ್ಲಿ ಸಾವನ್ನಪ್ಪಿದ ದಾಸರಹಳ್ಳಿಯಲ್ಲಿರುವ ಎಂ.ಎಸ್.ರಾಮಯ್ಯ ಲೇಔಟ್ ನಿವಾಸಿ ಭೂಮಿಕ್ ಅವರ ನಿವಾಸಕ್ಕೆ ತೆರಳಿ ಪೋಷಕರಿಗೆ ಸ್ವಾಂತನ ಹೇಳಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಈ ಪ್ರಕರಣದಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳೇ ನೇರ ಕಾರಣ. ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳುವ ಬದಲು ಎಐಸಿಸಿ ನಾಯಕರು ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ವಿರುದ್ಧ ಕ್ರಮ ಜರುಗಿಸಲಿ.ಇಲ್ಲದಿದ್ದರೆ ಹೈಕಮಾಂಡ್ ಖಾಲಿ ಕಮಾಂಡ್ ಆಗುವುದರಲ್ಲಿ ಅನುಮಾನವೇ ಇಲ್ಲ ಎಂದು ವ್ಯಂಗ್ಯವಾಡಿದರು.

ಸಿಎಂ ಪದೇ ಪದೇ ಸುಳ್ಳು ಹೇಳುತ್ತಿದ್ದಾರೆ. ಯಾರೋ ಕರೆದರೂ ನಾನು ಹೋಗಿದ್ದೇನೆ ಎನ್ನುತ್ತಾರೆ. ಡಿಸಿಪಿಯವರು ಕಾರ್ಯಕ್ರಮ ನಡೆಸುವುದಕ್ಕೆ ಸಿಬ್ಬಂದಿ ಕೊರತೆ ಇದೆ ಎಂದು ವರದಿ ಕೊಟ್ಟಿದ್ದಾರೆ. ಪಿಡಬ್ಲೂಡಿ ಅವರು 25 ಜನ ಇರಬೇಕೆಂದು ಆದೇಶ ಕೊಟ್ಟಿದ್ದಾರೆ. ಡಿಪಿಆರ್ ನೋಟ್ ಆದಮೇಲೆ ಸಿಎಸ್‌ಗೆ ಹೋಗುತ್ತದೆ. ಅವರು ಪತ್ರ ಬರೆದು ಸಿಎಂ ಕಳುಹಿಸುತ್ತಾರೆ. ಅದಕ್ಕೆ ಸಿಎಂಗೆ ಕಾರ್ಯಕ್ರಮ ನಡೆಸಲು ಅನುಮತಿ ನೀಡುತ್ತಾರೆ.ನೀವು ಅನುಮತಿ ನೀಡಿಲ್ಲ ಅಂದರೆ ಆ ಫೈಲ್‌ನ್ನು ನೀವು ಬಿಡುಗಡೆ ಮಾಡಿ. ಅನುಮತಿ ಕೊಟ್ಟಿಲ್ಲ ಅಂದ್ರೆ ಡಿಪಿಆರ್ ಸೆಕ್ರೆಟರಿ ನಾ ಅಮಾನತು ಮಾಡಿ ಇಲ್ಲದಿದ್ದರೆ ಸಿಎಸ್‌ನ ಸಸ್ಪೆಂಡ್ ಮಾಡಿ ಎಂದು ಸವಾಲು ಹಾಕಿದರು.

ಸಿಎಂ ಬೇಜವಾಬ್ದಾರಿಯುವಾಗಿ ಗೊತ್ತೆ ಇಲ್ಲ ಎಂದು ಹೇಳುತ್ತಿದ್ದಾರೆ. ಸಿಎಂ ಸಹಿ ಹಾಕಿದ ಫೈಲ್ ಹೊರಗೆ ಬಂದರೆ ಸರ್ಕಾರ ಬಂಡವಾಳ ಹೊರಗೆ ಬರುತ್ತದೆ ನೀವು ಸಹಿ ಮಾಡಿದ ಫೈಲ್ ಸಾರ್ವಜನಿಕಗೊಳಿಸಿ ಇಲ್ಲದಿದ್ದರೆ ಅನುಮತಿ ಇಲ್ಲದೇ ಕಾರ್ಯಕ್ರಮ ಮಾಡಿದ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಿ ಎಂದು ಒತ್ತಾಯಿಸಿದರು.

ಮಧ್ಯಾಹ್ನ 3.15 ಕ್ಕೆ ಸಾವಿನ ಸುದ್ದಿ ಬಂದಿದೆ. ನಿಮ ಮಾಧ್ಯಮ ಸಲಹೆಗಾರು, ನಿಮ ಸಿಬ್ಬಂದಿಗಳ ವೈಫಲ್ಯ ಎದ್ದು ಕಾಣುತ್ತಿದೆ. ವಿಷಯ ಗೊತ್ತಾದರೂ ಕಾರ್ಯಕ್ರಮ ಮಾಡಿದ್ದಾರೆ ಎಂದು ಆರೋಪಿಸಿದರು.

ಈ ವಿಚಾರ ಮರೆಮಾಚಲು ಸಚಿವ ಸಂಪುಟ ವಿಸ್ತರಣೆ ವಿಚಾರ ಪ್ರಸ್ತಾಪಿಸಿದ್ದಾರೆ. ಕಾಂಗ್ರೆಸ್ ಕುತಂತ್ರಕ್ಕೆ ಬಲಿಯಾಗಬಾರದು ಸಿಎಂ ಅವರ ಮೇಲೆ ಕ್ರಮವಾಗಬೇಕು, ಸಿಎಂ ಮತ್ತು ಡಿಸಿಎಂ ಅವರನ್ನು ಬದಲಿಸಬೇಕು. ಬದಲಿಸದಿದ್ದರೇ ಜನತೆ ಕಾಂಗ್ರೆಸ್ ಸರ್ಕಾರವನ್ನು ಬದಲಿಸುತ್ತಾರೆ ಎಂದು



ಎಚ್ಚರಿಕೆ ಕೊಟ್ಟರು.

ಮುಖ್ಯಮಂತ್ರಿ ದೆಹಲಿಗೆ ಹೋಗಿದ್ದಾರೆ. ದೆಹಲಿಯವರಿಗೂ ಗೊಂದಲವಾಗಿದೆ. ಕ್ರಿಕೆಟ್ ಸ್ಟೆಡಿಯಂ ನಂದು, ವಿಧಾನಸೌಧ ನಂದು ಎನ್ನುತ್ತಿದ್ದಾರೆ. ಅದಕ್ಕೆ ಹೈಕಮಾಂಡ್ ಕೂಡ ಗೊಂದಲಕ್ಕಿಡಾಗಿದೆ ಎಂದು ವ್ಯಂಗ್ಯವಾಡಿದರು.

ರಾಜ್ಯ ಸರ್ಕಾರದ ವಿರುದ್ಧ ಸುಮೋಟೊ ತೆಗಕೊಂಡಿದೆ ಅಂದರೆ ಅದು ಸರ್ಕಾರಕ್ಕೆ ಅವಮಾನ. ಸರ್ಕಾರದ ತಪ್ಪು ಎಂದು ದುರಂತದಲ್ಲಿ ಮೃತಪಟ್ಟವರ ಕುಟುಂಬಸ್ಥರು ಹೇಳುತ್ತಿದ್ದಾರೆ ಎಂದು ಅಶೋಕ್ ಸರ್ಕಾರದ ವಿರುದ್ಧ ಕಿಡಿಕಾರಿದರು.

ಈ ವೇಳೆ ವಿಧಾನಪರಿಷತ್ತಿನ ಪ್ರತಿಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ, ಶಾಸಕ ಮುನಿರಾಜು, ದಾಸರಹಳ್ಳಿ ಬಿಜೆಪಿ ಮಂಡಲ ಅಧ್ಯಕ್ಷ ಸೋಮಶೇಖರ್ ಬಿ., ಕೃಷ್ಣಮೂರ್ತಿ.ಬಿ, ಎಂ.ನಾರಾಯಣ್, ಬಿ.ಎಂ.ಕೃಷ್ಣ , ಭರತ್ ಸೌಂದರ್ಯ, ಹಾವನೂರು ಬಡಾವಣೆ ಹನುಮಂತರಾಯಪ್ಪ ಮತ್ತಿತರರು ಇದ್ದರು.

# 4.79 ಕೋಟಿ ರೂ. ದೋಖಾ, ಇಬ್ಬರು ಸೈಬರ್ ವಂಚಕರ ಬಂಧನ

**ಬೆಂಗಳೂರು,ಜೂ.10–** ಬ್ಯಾಂಕ್ ಪ್ರತಿನಿಧಿ ಸೋಗಿನಲ್ಲಿ ಎಂಜಿನಿಯರೊಬ್ಬರಿಗೆ ಕರೆ ಮಾಡಿದ ಸೈಬರ್ ವಂಚಕರು ನಿಮ ಖಾತೆಯಿಂದ ಅಕ್ರಮವಾಗಿ ಹಣ ವರ್ಗಾವಣೆಯಾಗಿದೆ, ನಿಮನ್ನು ಬಂಧಿಸುವುದಾಗಿ ಬೆದರಿಸಿ 4.79 ಕೋಟಿ ರೂ. ಹಣ ಸುಲಿಗೆ ಮಾಡಿರುವ ಘಟನೆ ನಗರದಲ್ಲಿ ನಡೆದಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈದರಾಬಾದ್‌ನಲ್ಲಿ ಇಬ್ಬರು ವಂಚಕರನ್ನು ಆಗ್ನೆಯ ವಿಭಾಗದ ಸಿಇಎನ್ ಠಾಣೆ ಪೊಲೀಸರು ಬಂಧಿಸಿದ್ದಾರೆ.ನಾರಾಯಣ್ ಸಿಂಗ್ ಚೌಧರಿ ಮತ್ತು ಈಶ್ವರ್‌ಸಿಂಗ್ ಬಂಧಿತ ವಂಚಕರು.ಈ ಪ್ರಕರಣದಲ್ಲಿ ಇನ್ನೂ ಹಲವರು ಭಾಗಿಯಾಗಿ ವಿಶಾಖಪಟ್ಟಣ, ಚೆನ್ನೈ ಹಾಗೂ ಇನ್ನಿತರ ಕಡೆಗಳಲ್ಲಿ ತಲೆಮರೆಸಿಕೊಂಡಿದ್ದು ಅವರ ಪತ್ತೆ ಕಾರ್ಯ ಮುಂದುವರೆದಿದೆ.ಎಂಜಿನಿಯರ್ ಮಂಜುನಾಥ್ ಎಂಬುವವರು ಆಫ್ರಿಕಾದ ನೈಜೀರಿಯಾದಲ್ಲಿ ಸತತ 31 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿ ಬಳಿಕ ವಾಪಸ್ ಬೆಂಗಳೂರಿಗೆ ಬಂದು ಪತ್ನಿ ಜೊತೆ ಬಿಟಿಎಂ ಲೇಔಟ್‌ನಲ್ಲಿ ನೆಲೆಸಿದ್ದಾರೆ. ಇವರಿಗೆ ಕಳೆದ ಮಾರ್ಚ್‌ನಲ್ಲಿ ಬ್ಯಾಂಕ್ ಪ್ರತಿನಿಧಿ ಸೋಗಿನಲ್ಲಿ ಕರೆ ಮಾಡಿದ ವಂಚಕರು ನಿಮ ಕ್ರೆಡಿಟ್ ಕಾರ್ಡ್ ಲಿಮಿಟ್ ಓವರ್ ಡ್ಯೂ ಆಗಿದೆ ಎಂದು ನಂಬಿಸಿ ಅವರ ಬ್ಯಾಂಕ್‌ನ ವಿವರಗಳನ್ನು ಪಡೆದುಕೊಂಡಿದ್ದಾರೆ.

ತದ ನಂತರ ನಿಮ ಖಾತೆಯ ಮೂಲಕ ಅಕ್ರಮವಾಗಿ ಹಣ ವರ್ಗಾವಣೆಯಾಗಿದೆ, ನಿಮ ವಿರುದ್ಧ ಇಡಿ ಮತ್ತು ಸಿಬಿಐನಲ್ಲಿ ಪ್ರಕರಣ ದಾಖಲಾಗಿದೆ ಎಂದು ಹೇಳಿ ನಕಲಿ ವಾರೆಂಟ್‌ನ ಫೋಟೋ ಕಳುಹಿಸಿ ನಿಮನ್ನು ಬಂಧಿಸಿ ತಿಹಾರ್ ಜೈಲಿನಲ್ಲಿರಿಸುತ್ತೇವೆಂದು ಹೆದರಿಸಿ ಹಂತ ಹಂತವಾಗಿ ಬರೋಬ್ಬರಿ 4.79 ಕೋಟಿ ರೂ. ಹಣವನ್ನು ಸುಲಿಗೆ ಮಾಡಿದ್ದಾರೆ. ನಂತರ ಹಣ ಇಲ್ಲ ಎಂದಾಗ ಆಸ್ತಿ ಪತ್ರಗಳ ಕಾಪಿಗಳನ್ನು ಪಡೆದುಕೊಂಡಿದ್ದಾರೆ. ಇಷ್ಟಕ್ಕೆ ಸುಮನಾಗದ ವಂಚಕರು ಮತ್ತೆ ಮತ್ತೆ ಹಣಕ್ಕಾಗಿ ಕಿರುಕುಳ ನೀಡುತ್ತಿದ್ದಾಗ,ನೊಂದ ಎಂಜಿನಿಯರ್ ಮಂಜುನಾಥ್ ಆಗ್ನೆಯ ವಿಭಾಗದ ಸಿಇಎನ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ತನಿಖೆ




ಕೈಗೊಂಡ ಪೊಲೀಸರು ವಂಚಕರ ಬಗ್ಗೆ ಹಲವು ಮಾಹಿತಿಗಳನ್ನು ಕಲೆ ಹಾಕಿ ಇಬ್ಬರನ್ನು ಹೈದರಾಬಾದ್‌ನಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿದಾಗ, ಎಂಜಿನಿಯರ್‌ನಿಂದ ಪಡೆದುಕೊಂಡಿದ್ದ ಹಣವನ್ನು ಶ್ರೀಲಂಕಾದಲ್ಲಿ ಕ್ಯಾಸಿನೋ ಆಡಲು ಬಳಸಿರುವುದು ಗೊತ್ತಾಗಿದೆ. ಆರೋಪಿ ಈಶ್ವರ್ ಸಿಂಗ್ ಅಕೌಂಟ್‌ನಲ್ಲಿದ್ದ ಹಣವನ್ನು ಪೊಲೀಸರು ಫ್ರಿಜ್ ಮಾಡಿದ್ದಾರೆ.ಮತ್ತೊಬ್ಬ ಆರೋಪಿ ನಾರಾಯಣ್ ಸಿಂಗ್ ಚೌಧರಿ ಖಾತೆಯಲ್ಲಿ 1.60 ಕೋಟಿ ರೂ. ಹಣ ಇರುವುದನ್ನು ಪೊಲೀಸರು ಪತ್ತೆ ಹಚ್ಚಿದ್ದು, ಆ ಹಣವನ್ನೂ ಸಹ ಫ್ರಿಜ್ ಮಾಡುವುದಾಗಿ ಪೊಲೀಸ್ ಅಧಿಕಾರಿಯೊಬ್ಬರು ಈ ಸಂಜೆಗೆ ತಿಳಿಸಿದ್ದಾರೆ.

# ಕಾಶ್ಮೀರಕ್ಕೆ ರೈಲು ನೀಡಿದ ಪ್ರಧಾನಿ ಮೋದಿಗೆ ಅಬ್ದುಲ್ಲಾ ಶ್ಲಾಘನೆ

**ಶ್ರೀನಗರ, ಜೂ.10–** ಪ್ರಧಾನಿ ನರೇಂದ್ರ ಮೋದಿ ಅವರು ಕಾಶ್ಮೀರಕ್ಕೆ ಆರಂಭಿಸಿದ ಹೊಸ ರೈಲು ಸೇವೆಯು ಸ್ಥಳೀಯರಿಗೆ ಮತ್ತು ಪ್ರವಾಸಿಗರಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ನ್ಯಾಶನಲ್ ಕಾನ್ಫರೆನ್ಸ್ ಪಕ್ಷದ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಹೇಳಿದ್ದಾರೆ.

ಇಂದು ನಾನು ಈ ರೈಲಿನಲ್ಲಿ ಕತ್ರಾಗೆ ಪ್ರಯಾಣಿಸುತ್ತಿರುವುದು ನನಗೆ ತುಂಬಾ ಸಂತೋಷ ತಂದಿದೆ. ಇದು ನಮಗೆ ದೊಡ್ಡ ಪ್ರಯೋಜನವಾಗಿದೆ ಎಂದು ಹಲವಾರು ಪಕ್ಷದ ಸಹೋದ್ಯೋಗಿಗಳೊಂದಿಗೆ ಬಂದ ಅಬ್ದುಲ್ಲಾ ರೈಲು ಹತ್ತುವ ಮೊದಲು ಸುದ್ದಿಗಾರರಿಗೆ ತಿಳಿಸಿದರು.ಕಾಶ್ಮೀರವನ್ನು ಭಾರತದ ಉಳಿದ ಭಾಗಗಳೊಂದಿಗೆ ಸಂಪರ್ಕಿಸುವ ರೈಲು ಕಣಿವೆಯ ಜನರಿಗೆ ವಿಶ್ವಾಸಾರ್ಹಸಾರಿಗೆ ಸಂಪರ್ಕವಾಗಿರುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹೇಳಿದರು.



(ಶ್ರೀನಗರ ಮತ್ತು ಜಮ್ಮು ನಡುವಿನ) ರಸ್ತೆ ಕೆಲವೊಮ್ಮೆ ಮುಚ್ಚಲ್ಪಡುತ್ತದೆ ಮತ್ತು ವಿಮಾನಯಾನ ಸಂಸ್ಥೆಗಳು ಬೆಲೆಗಳನ್ನು ಹೆಚ್ಚಿಸುವ ಮೂಲಕ ಜನರನ್ನು ವಂಚಿಸಲು ಪ್ರಾರಂಭಿಸುತ್ತವೆ. ಈ ರೈಲಿನೊಂದಿಗೆ, ಜನರು ಅದರಿಂದ ರಕ್ಷಿಸಲ್ಪಡುತ್ತಾರೆ ಎಂದು ಅವರು ಹೇಳಿದರು. ಉತ್ಪನ್ನಗಳು ವೇಗವಾಗಿ ಮಾರುಕಟ್ಟೆಗಳನ್ನು ತಲುಪುವುದರಿಂದ ರೈಲ್ವೆ ಸಂಪರ್ಕವು ಕಾಶ್ಮೀರದ ತೋಟಗಾರಿಕೆ ವಲಯಕ್ಕೂ ಪ್ರಯೋಜನಕಾರಿಯಾಗಿದೆ ಎಂದು ಅಬ್ದುಲ್ಲಾ ಹೇಳಿದರು. ಇದು ಕಾಶ್ಮೀರಕ್ಕೆ ಭೇಟಿ ನೀಡುವ ಪ್ರವಾಸಿಗರಿಗೂ ಪ್ರಯೋಜನವನ್ನು ನೀಡುತ್ತದೆ ಎಂದು ಅವರು ಹೇಳಿದರು.

# ಮೋದಿ ಆಡಳಿತಕ್ಕೆ ಜೀರೋ ಅಂಕ ನೀಡಿದ್ದ ಸಿಎಂ ಸಿದ್ದರಾಮಯ್ಯಗೆ ಜೋಶಿ ತಿರುಗೇಟು

**ಬೆಂಗಳೂರು,ಜೂ.10–** ಪ್ರಧಾನಿ ನರೇಂದ್ರಮೋದಿ ಸರ್ಕಾರದ ಸಾಧನೆಗೆ ಶೂನ್ಯ ಅಂಕ ನೀಡುವವರಿಗೆ ಓದುವಂತಹ ಬುದ್ಧಿ ಇರಬೇಕು. ಇಲ್ಲವೇ ಕಡೆಪಕ್ಷ ಓದುವಂತರನ್ನಾದರೂ ಜೊತೆಯಲ್ಲಿ ಇಟ್ಟುಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ತಿರುಗೇಟು ಕೊಟ್ಟಿದ್ದಾರೆ.

ಹಿಂದೆ ವಂದೇ ಭಾರತ್ ಯೋಜನೆಯನ್ನು ಅಪಹಾಸ್ಯ ಮಾಡಿದ್ದರು. ಜಲಮಾರ್ಗ ಸ್ಥಾಪನೆಗೂ ಅವಕಾಶ ನೀಡಿರಲಿಲ್ಲ. ದೇಶದ ರಾಜಕೀಯ ಇತಿಹಾಸದಲ್ಲಿ ಇದು ಪರಿವರ್ತನೆಯ ಪರ್ವವಾಗಿದೆ.

ವಿಕಾಸ ಪರ್ವ ನಮ ಪರ್ವ. ಅಭಿವೃದ್ಧಿ ನಮ ಬದ್ಧತೆ. ಮೋದಿ ಸರ್ಕಾರಕ್ಕೆ ಶೂನ್ಯ ಅಂಕ ಕೊಡುವವರು ಸರಿಯಾಗಿ ಓದಿ ತಿಳಿದುಕೊಂಡು ಮಾತನಾಡಲಿ ಎಂದು ವ್ಯಂಗ್ಯವಾಡಿದರು.

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಪೂರ್ಣಗೊಳಿಸಿದ ಹಿನ್ನಲೆಯಲ್ಲಿ ಪಕ್ಷದ ಕಚೇರಿಯಲ್ಲಿ ಸಂಸದ ಗೋವಿಂದ ಕಾರಜೋಳ ಹಾಗೂ ರಾಜ್ಯಸಭಾಸದಸ್ಯ ಜಗ್ಗೇಶ್ ಜೊತೆ ಜಂಟಿ ಪತ್ರಿಕಾಗೋಷ್ಠಿ ನಡೆಸಿದ ಪ್ರಹ್ಲಾದ್ ಜೋಷಿ, ಕೇಂದ್ರ ಸರ್ಕಾರದ ಸಾಧನೆಗಳನ್ನು ಅನಾವರಣಗೊಳಿಸಿದರು.ಯಾರಾದರೂ ಕಾಲು ಕೆರೆದು ಜಗಳಕ್ಕೆ ಬಂದರೆ ಕ್ಷಾತ್ರ ತೇಜಸ್ದ್ದು ಇರುವ ಸರ್ಕಾರ ನಮದು. ಮುಂದಿ ವರ್ಷಗಳಲ್ಲಿ ಭಾರತ 3ನೇ ಆರ್ಥಿಕ ಶಕ್ತಿಯಾಗಿ ರೂಪುಗೊಳ್ಳಲಿದೆ. 2047ಕ್ಕೆ ವಿಕಸಿತ ಭಾರತವಾಗಿ ರೂಪುಗೊಳ್ಳಲು ನಮ ಎಲ್ಲಾ ರೋಡ್ ಮ್ಯಾಪ್‌ಗಳು ಸಿದ್ಧವಾಗಿವೆ ಎಂದು ಹೇಳಿದರು.

ಆಪರೇಷನ್ ಸಿಂಧೂರ ವಿಚಾರದಲ್ಲಿ ಪಾಕಿಸ್ತಾನದ ವರ್ಷನ್ ಮಾತನಾಡುವವರಿಗೆ ನಾನು ಉತ್ತರ ಕೊಡುವುದಿಲ್ಲ. ಅವರ ವಾಯುವೆಲೆ ನಾಶವಾಗಿವೆ ಎಂದು ಪಾಕಿಸ್ತಾನವೇ ಒಪ್ಪಿಕೊಂಡಿದೆ. ಇಂದು ಪ್ರಪಂಚದಾದ್ಯಂತ ಹೋಗಿ ಅವರು ಅಳುತ್ತಿದ್ದಾರೆ. ಕಾಂಗ್ರೆಸ್ ಪಕ್ಷದವರು ಯಾಕೆ ಪಾಕಿಸ್ತಾನಕ್ಕೆ ಅನುಕೂಲ ಆಗುವ ರೀತಿ ಯಾಕೆ ಮಾತಾಡುತ್ತಿದ್ದಾರೆ? ಅಕ್ರಮ ನುಸುಳುಕೋರರನ್ನು ತಡೆಯುವ ಕೆಲಸ ಆಗುತ್ತಿದೆ ಎಂದರು.

ಭಾರತ ಜಗತ್ತಿನ ನಾಲ್ಕನೇ ಆರ್ಥಿಕ ಶಕ್ತಿಯಾಗಿ ಹೊರಹೊಮಿದೆ. ಕಡು ಬಡತನ ಶೇ.21ರಿಂದ ಶೇ.5ಕ್ಕೆ ಇಳಿದಿದೆ. 26 ಕೋಟಿಯಷ್ಟು ಜನರು ಬಡತನ ರೇಖೆಯಿಂದ ಹೊರಗೆ ಬಂದಿದ್ದಾರೆ. ಇದು ಸಮರ್ಥ ನಾಯಕತ್ವ ಮತ್ತು ಸ್ಥಿರ ಸರ್ಕಾರದ ಪರಿಣಾಮ ಎಂದು ಹೇಳಿದರು.ಹಿಂದೆ ಮಿಲಿಟರಿ ವಿಚಾರದಲ್ಲಿ ಸಮರ್ಥ ನಿರ್ಧಾರ ಕೈಗೊಳ್ಳಲಾಗದ ಸರ್ಕಾರ ಇತ್ತು. ಗಡಿ ಭಾಗದಲ್ಲಿ ಸಿಡಿಎಸ್‌ಗೆ ಮೂಲಸೌಕರ್ಯ ಕೊಟ್ಟಿದ್ದೇವೆ. ಶತ್ರು ದೇಶದ ಒಳಗೆ ಹೋಗಿ ನಮ ಮಿಸೈಲ್ ಹೊಡೆದು ಬಂದಿದ್ದೇವೆ. ಉಗ್ರ ಚಟುವಟಿಕೆ



ಈಗ ದೇಶದೊಳಗೆ ಬಹುತೇಕ ಇಳಿದಿದೆ. ಜಮು ಕಾಶಿರದಲ್ಲಿ 370ನೇ ವಿಧಿ ರದ್ದು, ಏಕತಾ ಮೂರ್ತಿ, ರಾಮಮಂದಿರ, ಕಾಶಿ ವಿಶ್ವನಾಥ ಕಾರಿಡಾರ್, ಮಹಾಕಾಲ್ ಪ್ರಾಜೆಕ್ಟ್ ಎಲ್ಲವೂ ಆಗಿದೆ. ಗಡಿ ಪ್ರದೇಶಕ್ಕೆ ಮಾತ್ರ ಈಗ ಉಗ್ರ ಚಟುವಟಿಕೆ ಸೀಮಿತವಾಗಿದೆ. ಅದಕ್ಕೂ ಭಾರತ ತಕ್ಕ ಉತ್ತರ ಕೊಟ್ಟಿದೆ ಎಂದು ಕೇಂದ್ರದ ಸಾಧನೆಗಳ ಬಗ್ಗೆ ವಿವರಿಸಿದರು.

ಮೋದಿ–3 ಸರ್ಕಾರ ಒಂದು ವರ್ಷ ಪೂರೈಸಿದೆ, ಮೋದಿ ಸರ್ಕಾರ ಒಟ್ಟಾರೆ 11 ವರ್ಷ ಪೂರೈಸಿದೆ. 2014ರಿಂದೀಚೆಗೆ ಮೋದಿ ಸರ್ಕಾರದ ದೊಡ್ಡ ಕೊಡುಗೆ ದೇಶದಲ್ಲಿ ಸುಸ್ಥಿರ ಆಡಳಿತ ನೀಡಿರುವುದು. ಸುಸ್ಥಿರತೆ ಇಲ್ಲದ ಕಾರಣ ಹಿಂದಿನ ಯುಪಿಎ ಸರ್ಕಾರ ಅಸಮರ್ಥತೆ ಪ್ರದರ್ಶಿಸಿತ್ತು ಎಂದು ಆರೋಪಿಸಿದರು.ಆರ್ಥಿಕ ಪ್ರಗತಿಯಲ್ಲಿ ಭಾರತ ಜಗತ್ತಿನ ನಾಲ್ಕನೇ ದೊಡ್ಡ ರಾಷ್ಟ್ರವಾಗಿ ಹೊರಹೊಮಿದೆ. 1 ಟ್ರಿಲಿಯನ್ ಆರ್ಥಿಕತೆಗೆ 30–40 ವರ್ಷ, 2 ಟ್ರಿಲಿಯನ್ ಆಗಲು 65 ವರ್ಷ ಆಯ್ತು..ಈಗ 2 ರಿಂದ 4 ಟ್ರಿಲಿಯನ್ ಆರ್ಥಿಕತೆಯ ದೇಶವಾಗಿದೆ. ದೇಶದ ಬಡತನ ಶೇ.25ರಿಂದ ಶೇ.5ಕ್ಕೆ ಇಳಿದಿದೆ. 26 ಕೋಟಿ ಜನ ಬಡತನ ರೇಖೆಯಿಂದ ಹೊರಗೆ ಬಂದಿದ್ದಾರೆ. ಇದನ್ನು ಹೇಳಿದ ತಕ್ಷಣ ಕಾಂಗ್ರೆಸ್ ಪ್ರಶ್ನೆ ಮಾಡಬಹುದು. ಇದು ನಮ ಅಂಕಿಅಂಶ ಅಲ್ಲ, ವಿಶ್ವಬ್ಯಾಂಕ್ ಅಂಕಿ ಅಂಶ. ಒಂದು ಸಮರ್ಥ ಸರ್ಕಾರ, ಸಮರ್ಥ ನಾಯಕ ಇರುವ ಕಾರಣ ಪ್ರಗತಿಗೆ ಪೂರಕವಾಗಿದೆ ಎಂದು ಹೇಳಿದರು.

ಪಶುಪತಿ ಟು ತಿರುಪತಿವರೆಗೆ ರೆಡ್ ಕಾರಿಡಾರ್ ಹಾಕಿಸುತ್ತೆವೆ ಎಂದು ನಕ್ಸಲರು ಹೇಳಿದ್ದರು. ಈಗ ನಮ ಸರ್ಕಾರ ನಕ್ಸಲ್ ಚಟುವಟಿಕೆಯನ್ನು ಸಂಪೂರ್ಣ ತೊಡೆದು ಹಾಕಿದೆ ಎಂದರು. ಡಿಫೆನ್ ರಫ್ತು ಪ್ರಮಾಣ 25 ಸಾವಿರ ಕೋಟಿಯಷ್ಟು ಹೆಚ್ಚಾಗಿದೆ.

ಜಗತ್ತಿನಲ್ಲಿ ಎಲ್ಲೆ ಭಾರತೀಯರಿಗೆ ತೊಂದರೆ ಆದರೆ ನಾವು ಅತ್ಯಂತ ಯಶಸ್ವಿಯಾಗಿ ನಮ ಜನರನ್ನು ವಾಪಸ್ ಕರೆತಂದಿದ್ದೇವೆ ಎಂದ ಅವರು, 70% ನಕ್ಸಲಿಸಂ ಕಡಿಮೆಯಾಗಿದೆ. 34 ಬಾರಿ ನಮ ರಕ್ಷಣಾ ಸಾಮಗ್ರಿಗಳ ರಫ್ತು ಜಾಸ್ತಿ ಆಗಿದೆ. 20 ಸಾವಿರ ಕೋಟಿ ರಫ್ತು ಹೆಚ್ಚಾಗಿದೆ ಎಂದು ಅಂಕಿಅಂಶ ನೀಡಿದರು.ಕೋವಿಡ್ ಭಾರತಕ್ಕೆ ಬಂದರೆ ಕೋಟಿ ಕೋಟಿ ಜನ ಸಾಯ್ತಾರೆ ಎಂಬ ಮಾತುಗಳು ಕೇಳಿಬಂದಿದ್ದವು. ಆದರೆ ನಾವು ಯಾವ ರೀತಿ ಎದುರಿಸಿದ್ದೇವೆ ಅನ್ನೊ?ದು ಜಗತ್ತು ನೋಡಿದೆ. ನಮ 137 ಕೋಟಿ ಜನರಿಗೆ ವ್ಯಾಕ್ಸಿನ್ ಕೊಟ್ಟು ಬೇರೆ ದೇಶಗಳಿಗೂ ಕಳಿಸಿಕೊಟ್ಟಿದ್ದೇವೆ ಎಂದು ಹೇಳಿದರು.

ಕೋವಿಡ್ ಬಳಿಕ ಭಾರತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯನ್ನು ಹೊಂದಿದೆ. 2024ರಲ್ಲಿ ಡಿಜಿಟಲ್ ಟ್ರಾನ್ಸಾಕ್ಷನ್ 24 ಲಕ್ಷ ಕೋಟಿ ಆಗಿದೆ. ಶೇ.83 ಯುಪಿಐ ಖಾತೆಗಳು ಇವೆ. ಹಿಂದೆ ಆರ್ಥಿಕ ತಜ್ಞರು ಮೋದಿಯವರನ್ನು ಗೇಲಿ ಮಾಡಿದ್ದರು. 44 ಲಕ್ಷ ಕೋಟಿ ರೂ. ಡಿಬಿಟಿ ಮೂಲಕ ಫಲಾನುಭವಿಗಳಿಗೆ ಪಾವತಿಯಾಗಿದೆ. 6 ಲಕ್ಷದ 93 ಸಾವಿರ ಕಿ.ಮೀ. ಓಎಫ್ ಸಿ ಹಾಕಲಾಗಿದೆ. 70 ವರ್ಷಗಳಲ್ಲಿ 70–80 ಸಾವಿರ ಕೋಟಿ ಅಷ್ಟೆ ಸಾಲ ಮನ್ನಾವಾಗಿದೆ. ಕಳೆದ 6 ವರ್ಷಗಳಲ್ಲಿ 3.60 ಲಕ್ಷ ಕೋಟಿ. ರೂ. ಸಾಲ ಮನ್ನಾ ಮಾಡಲಾಗಿದೆ.ಮಹಿಳಾ ಪೈಲಟ್ ಗಳಿರುವ ದೇಶಗಳ ಪೈಕಿ ಭಾರತ ನಂಬರ್ ಒನ್, ಕೇಂದ್ರ ಸಚಿವ ಸಂಪುಟದಲ್ಲಿ ಶೇ.60ರಷ್ಟು ಎಸ್ ಸಿ, ಎಸ್ ಟಿ, ಒಬಿಸಿ ಇದ್ದಾರೆ ಎಂದು ವಿವರಿಸಿದರು.

ಪ್ರಧಾನಮಂತ್ರಿ ಎಂಬ ಶಬ್ದ 30 ವರ್ಷಗಳಿಂದ ಕಾಂಗ್ರೆಸ್ ನವರಿಗೆ ಅಲರ್ಜಿ. ಯಾಕೆಂದರೆ ಅಲ್ಲಿ ನಕಲಿ ಗಾಂಧಿ ಪರಿವಾರದವರು ಇಲ್ಲ. ಅದಕ್ಕೆ ಪ್ರಧಾನಮಂತ್ರಿ ಎಂದ ಕೂಡಲೇ ಕಾಂಗ್ರೆಸ್?ನವರಿಗೆ ತಲೆ ಕೆಟ್ಟು ಬಿಡುತ್ತದೆ. ಅದಕ್ಕೆ ಜನೌಷಧಿ ಕೇಂದ್ರ ಮುಚ್ಚುವ ಹುಚ್ಚಾಟ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಂಗ್ರೆಸ್ ನಾಯಕರಿಗೆ ಸರ್ವ ಪಕ್ಷ ನಿಯೋಗದ ನೇತೃತ್ವ ವಹಿಸಿ ಕಳುಹಿಸಿದ್ದ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಹಸ್ತಿನಾಪುರದ ಮೇಲೆ ದಾಳಿ ನಡೆದಾಗ ಕೌರವರು ಪಾಂಡವರು ಒಂದೇ ಎಂದು ಧರ್ಮರಾಯ ಹೇಳಿದ್ದ.ಅದು ನಮ ನೀತಿ. ಸರ್ವ ಪಕ್ಷ ನಿಯೋಗದಿಂದ ಭಾರತಕ್ಕೆ ವಿಶ್ವಮಟ್ಟದಲ್ಲಿ ಸಹಾಯವಾಗಿದೆ ಎಂದು ಜೋಷಿ ಹೇಳಿದರು.

ಯುವ ಮಾರ್ಗ

ಬುಧವಾರ : 11-06-2025

## ಇಂಜಿನಿಯರ್ಸ್ ಆಸೋಶಿಯೇಷನ್ : ಪದಾಧಿಕಾರಿಗಳ ನೇಮಕ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.10–** ಗೋಲ್ಡನ್ ಸಿವಿಲ್ ಇಂಜಿನಿಯರ್ಸ್ ಆಸೋಶಿಯೇಷನ್ ಸಂಘಟನೆಗೆ ನೂತನ ಪದಾಧಿಕಾರಿಗಳ ಆಯ್ಕೆಯಾಗಿದ್ದಾರೆ.

ಗೌರವಾಧ್ಯಕ್ಷರಾಗಿ ವಾಜೇಂದ್ರ ಹೂನೂರು, ಅಧ್ಯಕ್ಷರಾಗಿ ವಿಜಯ ಹಿರೇಮಠ, ಉಪಾಧ್ಯಕ್ಷರಾಗಿ ಮಹೇಶ ಎನ್., ಕಾರ್ಯದರ್ಶಿಯಾಗಿ ಶಿವರಾಜ ಬೋರಿ, ಜಂಟಿ ಕಾರ್ಯದರ್ಶಿಯಾಗಿ ರಾಹುಲ್ ಪಾಟೀಲ್, ಖಜಾಂಚಿಯಾಗಿ ವೈಭವ.ಕೆ, ಇವರನ್ನು ಆಯ್ಕೆ ಮಾಡಲಾಯಿತ್ತು.

ಆಯ್ಕೆಯಾದ ಪದಾಧಿಕಾರಿಗಳನ್ನು ಆಸೋಶಿಯೇಷನ್ ಪರವಾಗಿ ಇತರೆ ಸದಸ್ಯರು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು. ಹಿರಿಯ ಸದಸ್ಯರಾದ ಈರಣ್ಣ, ರಾಜಶೇಖರ, ರಾಜಶೇಖರ.ಪಿ, ಪ್ರಮೋದ್‌ಸಿಂಗ್, ವಿಜಯ ನಾಯಿಕೋಡಿ, ಪ್ರಶಾಂತ, ಅಖ್ತರ್ ಪಟೇಲ್, ಅಬ್ಬು ಸೂಪೀಯಾನ್, ಶಂಕರಗೌಡ ಸೇರಿ ಇತರರು ಇದ್ದರು.

## ಉಪ್ಪಾರ ಅಭಿವೃದ್ಧಿ ನಿಗಮದಿಂದ ಸಾಲ–ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜೂ.10–**ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಹಾಗೂ ಸಾಲ–ಸೌಲಭ್ಯಕ್ಕೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗಳು: ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ (ಬ್ಯಾಂಕ್‌ಗಳ ಸಹಯೋಗದೊಂದಿಗೆ), ಅರಿವು ಶೈಕ್ಷಣಿಕ ಸಾಲ ಯೋಜನೆ(ನೂತನ), ಅರಿವು ಶೈಕ್ಷಣಿಕ ಸಾಲ ಯೋಜನೆ (ನವೀಕರಣ), ವಿದೇಶಿ ವ್ಯಾಸಂಗ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ ಅಮೃತ ಮುನ್ನಡೆ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯ ನೀಡಲಾಗುವುದು.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ವಿಶೇಷ ಸೂಚನೆ: ನಿಗಮದ ಸೌಲಭ್ಯಕ್ಕಾಗಿ 2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಅರ್ಜಿದಾರರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಉಳಿದ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್‌ಜೀ ಜನಸ್ನೇಹಿ ಕೇಂದ್ರ ಮತ್ತು ನಾಗರಿಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ವಿಳಾಸ: ಽಣಣಠಿ://ಜತಿಭಟಿಜಿಜುಣ.ಇಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ಜುಲೈ 03 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ http:// upparadevelopment.karnataka.gov.in ಅಥವಾ ನಿಗಮದ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ: 080–22252555 ಹಾಗೂ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ನಂ: 1–1–158, ಉದಯನಗರ, ಕರ್ನಾಟಕ ಗ್ರಾಮೀಣ ಬ್ಯಾಂಕ ಹಿಂಭಾಗ, ಉಮಾ ಹೋಟೆಲ್ ಹತ್ತಿರ, ಸ್ಟೇಷನ ರೋಡ್, ರಾಯಚೂರು ದೂರವಾಣಿ ಸಂಖ್ಯೆ: 08532–250440ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ ಗ್ರಾಹಕರ ಕುಂದುಕೊರತೆ ಸಭೆ

**ರಾಯಚೂರು,ಜೂನ್,10–**ಜಿಲ್ಲೆಯ ವಿವಿಧ ತಾಲೂಕಿನ ಜೆಸ್ಕಾಂ ಉಪ ವಿಭಾಗಗಳ ಕಚೇರಿಯಲ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಜೂನ್ 23ರಿಂದ ಜೂನ್ 27ರವರೆಗೆ ಗ್ರಾಹಕರ ಕುಂದುಕೊರತೆ ಸಭೆ ಏರ್ಪಡಿಸಲಾಗಿದೆ.

ಜೂನ್ 23ರ ಬೆಳಿಗ್ಗೆ 11 ಗಂಟೆಗೆ ರಾಯಚೂರು ನಗರ ಉಪ ವಿಭಾಗ ಕಚೇರಿ 01, ಜೂನ್ 25ರ ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಸಿಂಧನೂರು ಹಾಗೂ ಜೂನ್ 27ರ ಬೆಳಿಗ್ಗೆ 11ಗಂಟೆಗೆ ಮಸ್ಕಿಯಲ್ಲಿ ಗ್ರಾಹಕರ ಕುಂದುಕೊರತೆ ಸಭೆ ಹಮ್ಮಿಕೊಳ್ಳಲಾಗಿದ್ದು, ಗ್ರಾಹಕರು ಅಥವಾ ಸಾರ್ವಜನಿಕರು ತಮ್ಮ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಈ ಗ್ರಾಹಕರ ಕುಂದುಕೊರತೆ ಸಭೆಯಲ್ಲಿ ಪಾಲ್ಗೊಂಡು ಪರಿಹರಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲ್ಮಠ ವೈದ್ಯಕೀಯ ಕಾಲೇಜಿನಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ

ಯುವ ಮಾರ್ಗ ಸುದ್ದಿ



**ಮಾನ್ವಿ,ಜೂ.10–**ಪಟ್ಟಣದ ಕಲ್ಮಠ ಶ್ರೀವಿರೂಪಾಕ್ಷೇಶ್ವರ ಆರ್ಯುವೇದಿಕ್ ಕಾಲೇಜ್ ಮತ್ತು ಆಸ್ಪತ್ರೆ ಹಾಗೂ ಬೆಂಗಳೂರಿನ ಸಪ್ತಗಿರಿ ಮಲ್ಟಿಸ್ಪಾಷಲೀಟಿ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮವನ್ನು ಕಲ್ಮಠ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಚಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಮಾತನಾಡಿ, ಅರೋಗ್ಯ ಭಾಗ್ಯವೇ ಮಹಾಭಾಗ್ಯ ಅದ್ದರಿಂದ ತಾಲೂಕಿನ ಎಲ್ಲಾ ಜನರಿಗೂ ಉಚಿತವಾಗಿ ಉತ್ತಮ ಆರೋಗ್ಯ ಸೇವೆಗಳನ್ನು ನೀಡುವುದು ಸೇರಿದಂತೆ ಎಲ್ಲಾ ಗಂಭೀರ ಕಾಯಿಲೆಗಳಿಗೂ ಒಂದೇ ಸ್ಥಳದಲ್ಲಿ ತಜ್ಞ ವೈದ್ಯರಿಂದ ತಪಾಸಣೆ ಹಾಗೂ ಚಿಕಿತ್ಸೆ ದೊರೆಯಲಿ ಎನ್ನುವ ಉದ್ದೇಶ ದಿಂದ ಬೆಂಗಳೂರಿನ ಸಪ್ತಗಿರಿ ಮಲ್ಟಿ ಸ್ಪಾಷಲೀಟಿ ಆಸ್ಪತ್ರೆಯ ನುರಿತ ತಜ್ಞವೈದ್ಯರಿಂದ ಆರೋಗ್ಯ ತಪಾಸಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಆರೋಗ್ಯ ಶಿಬಿರದಲ್ಲಿ, ನೇತ್ರ ತಪಾಸಣೆ, ಹೃದಯದ ಕಾಯಿಲೆಗಳು,ಎಲುಬುಗಳಿಗೆ ಸಂಬಂಧಿಸಿದ ಕಾಯಿಲೆಗಳು,ಕ್ಯಾನ್ಸರ್, ನರರೋಗ, ಸಾಮಾನ್ಯ ಕಾಯಿಲೆಗಳು,ಶಸ್ತ್ರ ಚಿಕಿತ್ಸೆ ಕುರಿತು ನುರಿತ ತಜ್ಞ ವೈದ್ಯರು ತಪಾಸಣೆ ನಡೆಸಿ ರೋಗಿಗಳಿಗೆ ಅಗತ್ಯ ಚಿಕಿತ್ಸೆ ನೀಡಿದರು.

ಕಾರ್ಯಕ್ರಮದಲ್ಲಿ ಕಲ್ಮಠ ಶ್ರೀ ವಿರೂಪಾಕ್ಷೇಶ್ವರ ಆರ್ಯುವೇದಿಕ್ ಕಾಲೇಜ್ ಮತ್ತು ಆಸ್ಪತ್ರೆಯ ಪ್ರಾಚಾರ್ಯರಾದ ಡಾ.ಜೀವನೇಶ್ವರಯ್ಯ, ಉಪಪ್ರಾಚಾರ್ಯರಾದ ಡಾ.ಸುಮಂಗಲ ಹಿರೇಮಠ, ಆರೋಗ್ಯ ಶಿಬಿರದ ಸಂಯೋಜಕರಾದ ಡಾ.ಪೃತ್ವಿ ಕುಮಾರ,ಡಾ.ಶಿವರಾಜ ಒಡೆಯರ್, ಡಾ.ವಿಶ್ವವೇಶ್ವರಯ್ಯ ಹಿರೇಮಠ, ಡಾ.ಶ್ರೀಕಾಂತ, ಡಾ.ಪವನ್ ದಾನಿ,ಡಾ.ಶರಣಮ್ಮ,ಡಾ, ರವಿಕಾಂತ, ಡಾ.ಹರ್ಷ ಸತ್ಯನಾರಾಯಣ,ಡಾ.ರಾಜೀವ್, ಎಕೋ ಟೆಕ್ನೀಷಿಯನ್ ಗಳಾದ ಪ್ರವೀಣ್ ,ವಿಕಾಸ್ ಸೇರಿದಂತೆ ವೈದ್ಯ ವಿದ್ಯಾರ್ಥಿಗಳು ಇದ್ದರು. ಆರೋಗ್ಯ ಶಿಬಿರದಲ್ಲಿ ವಿವಿಧ ಕಾಯಿಲೆಗಳಿಗೆ ರೋಗಿಗಳು ತಪಾಸಣೆ ಹಾಗೂ ಚಿಕಿತ್ಸೆಯನ್ನು ಪಡೆದುಕೊಂಡರು.

# ವಾರ್ಡನ್ ಪ್ರಭಾರ ಹುದ್ದೆ ರದ್ದುಗೊಳಿಸಿ, ಅಡುಗೆ ಕೆಲಸಕ್ಕೆ ನಿಯೋಜಿಸಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.10–** ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಅಡುಗೆಯವರನ್ನು ಪ್ರಭಾರಿ ಮೇಲ್ವಿಚಾರಕರನ್ನಾಗಿ ನೇಮಕ ಮಾಡಿರುವುದನ್ನು ರದ್ದುಗೊಳಿಸಿ, ಮರಳಿ ಅಡುಗೆ ಕೆಲಸಕ್ಕೆ ನಿಯೋಜಿಸಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಮಸ್ಕಿ ಪಟ್ಟಣದ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ಅಡುಗೆ ಕೆಲಸದ ಮೂಲ ಹುದ್ದೆ ಹೊಂದಿರುವ ಸುಧಾ ತಂದೆ ಸಿದ್ದರಾಮಯ್ಯ ಇವರನ್ನು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಪ್ರಭಾರಿ ಮೇಲ್ವಿಚಾರಕರೆಂದು ನೇಮಕ ಮಾಡಲಾಗಿದೆ. ಆದರೆ ಸುಧಾ ಅವರು ಆಯಾ ಹುದ್ದೆಗೆ ತಕ್ಕ ವಿದ್ಯಾರ್ಹತೆ ಹೊಂದಿಲ್ಲ. ಯಾವ ಮಾನದಂಡದ ಮೇಲೆ ಇವರನ್ನು ಆಯಾ ಹುದ್ದೆಗೆ ನೇಮಕ ಮಾಡಲಾಗಿದೆ ಎನ್ನುವುದು ತಿಳಿಯುತ್ತಿಲ್ಲ. ಕೂಡಲೇ ಆದೇಶವನ್ನು ರದ್ದುಪಡಿಸಿ, ಸುಧಾ ಅವರ ಮೂಲ ಹುದ್ದೆ ಅಡುಗೆ ಕೆಲಸಕ್ಕೆ ನಿಯೋಜಿಸಬೇಕೆಂದು ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ಚನ್ನಬಸವ, ಸಂಗಪ್ಪ, ನಾಗರಾಜ, ಶಿವಕುಮಾರ್, ಸಂಗಪ್ಪ ಸೇರಿ ಇತರರು ಇದ್ದರು.

# ಯೋಧನಿಗೆ ಗೌರವ ಸನ್ಮಾನ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.10–** ಎರಡು ದಶಕಗಳ ಕಾಲ ಭಾರತೀಯ ಸೇನೆಯಲ್ಲಿ ದೇಶ ಸೇವೆಗೈದು ನಿವೃತ್ತಿಯಾದ ಲಿಂಗಸುಗೂರು ಪಟ್ಟಣದ ಮಾಜಿ ಯೋಧ ಮಹೆಬುಬಸಾಬ್ ದವಲಸಾಬ್ ನದಾಫ್ ಅವರನ್ನು ಟಿಪ್ಪು ಸುಲ್ತಾನ್ ಯುವಕ ಸಂಘದ ಅಧ್ಯಕ್ಷರ ನೇತೃತ್ವದ ಮೂಲಕ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷ ಅಲ್ಲಾಭಕ್ಷ ಮನಿಯಾರ, ಮುನರುದ್ದಿನ ಖಾಜಿ, ಯೂನಸ್ ಬಾಸ್ಮಿ, ರುಸ್ತುಂ ಖಾನ್, ಅಜೀಮ ಪಟೇಲ್, ಜಮೀರ್, ದಾದು ಪಟೇಲ್, ಸೈಯಶಫಿಯುದ್ದಿನ್, ಖಾಜಾಹುಸೇನ್, ಶಾಹೀದ್ ಹವಾಲ್ದಾರ್ ಸೇರಿದಂತೆ ಇದ್ದರು.

# ಜೂನ್ 13 ರಂದು ಉದ್ಯೋಗ ಮೇಳ

**ರಾಯಚೂರು,ಜೂ.10–** ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆಯಿಂದ ನಗರದ ಥಾಮಸ್ ಪದವಿ ಮಹಾವಿದ್ಯಾಲಯದಲ್ಲಿ ಜೂನ್ 13ರ ಬೆಳಿಗ್ಗೆ 10 ರಿಂದ ಸಂಜೆ 4ಗಂಟೆವರೆಗೆ ಉದ್ಯೋಗ ಮೇಳ ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ. ಉದ್ಯೋಗ ಮೇಳದಲ್ಲಿ ಆನೇಕ ಖಾಸಗಿ ಸಂಸ್ಥೆಗಳು ಭಾಗಿಯಾಗುತ್ತಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 30 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ; 08532–231684, 9008211750, 8095125775 ಅಥವಾ 9886367517ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಚೇತನರಿಗೆ ಸರ್ಕಾರಿ ಸೌಲಭ್ಯಗಳ ಸದ್ಬಳಕೆ: ಆದನಗೌಡ ಬುಂಕಲದೊಡ್ಡಿ ಕರೆ

**ದೇವದುರ್ಗ,ಜೂ.10–** ವಿಕಲಚೇತನರು ಸ್ವಾವಲಂಬಿಗಳಾಗಿ ಬದುಕಲು ಸರ್ಕಾರ ರೂಪಿಸಿರುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಎಪಿಎಂಸಿ ಅಧ್ಯಕ್ಷ ಆದನಗೌಡ ಬುಂಕಲದೊಡ್ಡಿ ಕರೆ ನೀಡಿದ್ದಾರೆ. ದೇವದುರ್ಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಕಲಚೇತನರ ಹಕ್ಕುಗಳು ಮತ್ತು ಸೌಲಭ್ಯಗಳ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. 2016ರ ವಿಶೇಷ ಚೇತನರ ಹಕ್ಕುಗಳ ಕಾಯ್ದೆಯು ಅವರಿಗೆ ಅನೇಕ ಸೌಲಭ್ಯಗಳು ಮತ್ತು ಕಾನೂನುಬದ್ಧ ಪರಿಹಾರಗಳನ್ನು ಒದಗಿಸಿದೆ. ಇಂತಹ ಕಾರ್ಯಾಗಾರಗಳಲ್ಲಿ ಭಾಗವಹಿಸಿ ಮಾಹಿತಿ ಪಡೆದುಕೊಳ್ಳುವ ಮೂಲಕ ವಿಕಲಚೇತನರು ಸರ್ಕಾರದ ಯೋಜನೆಗಳ ಲಾಭ ಪಡೆಯಬೇಕು ಎಂದು ಅವರು ಹೇಳಿದರು.

ಎಂಆರ್‌ಡಬ್ಲ್ಯೂ ಲೋಕಪ್ಪ ಮಾತನಾಡಿ, ವಿಕಲಚೇತನರು ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು, 2016ರ ಕಾಯ್ದೆಯನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳುವುದು ಅಗತ್ಯ. ಸ್ವಾವಲಂಬಿ ಜೀವನ ನಡೆಸಲು ಅವಕಾಶಗಳಿದ್ದು, ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆ ಬರಲು ಎಲ್ಲರ ಸಹಕಾರ ಮುಖ್ಯ ಎಂದರು. ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ್ ಹಟ್ಟಿ ಮಾತನಾಡಿ, ವಿಕಲಚೇತನರು ಕೌಶಲ್ಯಾಭಿವೃದ್ಧಿಗೆ ಗಮನ ನೀಡಿ ಸ್ವತಂತ್ರವಾಗಿ ಜೀವನ ಸಾಗಿಸಲು ಮುಂದಾಗಬೇಕು. ತಾಲೂಕು ಪಂಚಾಯತ್ ತನ್ನ 5% ಅನುದಾನವನ್ನು ವಿಕಲಚೇತನರ ಇಲಾಖೆಗೆ ನೀಡಿದೆ. ಇದು ವಿಆರ್‌ಡಬ್ಲ್ಯೂ, ಎಂಆರ್‌ಡಬ್ಲ್ಯೂ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ಅಂಗವಿಕಲತೆ ತಡೆಗಟ್ಟುವಿಕೆ ಮತ್ತು 2016ರ ಕಾಯ್ದೆಯ ಬಗ್ಗೆ ಅರಿವು ಮೂಡಿಸಲು ಬಳಸಲಾಗುವುದು ಎಂದು ತಿಳಿಸಿದರು.

ಬಿಆರ್‌ಸಿ ಹೇಮಣ್ಣ ಉಪನ್ಯಾಸ ನೀಡಿದರು.



ಹನುಮಂತ ಬುಂಕಲದೊಡ್ಡಿ ಮತ್ತು ರಂಗಪ್ಪ ಕೆ. ಇರಬಗೇರಾ ಕಾರ್ಯಕ್ರಮ ನಿರೂಪಿಸಿದರು. ಚಿಂಚೋಡಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಚೆನ್ನಬಸವ ಬಿ ಗಣೆಕಲ್ ಅಧ್ಯಕ್ಷತೆ ವಹಿಸಿದ್ದರು. ಒಕ್ಕೂಟದ ಅಧ್ಯಕ್ಷ ವೆಂಕೋಬ ನಾಯಕ, ಗ್ರಾಮ ಪಂಚಾಯತಿ ಸದಸ್ಯರಾದ ಲಕ್ಷ್ಮಣ್ ಜಗ್ಗಿ, ತಿಮ್ಮಣ್ಣ, ರಾಚಯ್ಯ ಸ್ವಾಮಿ, ರವಿ, ಮಾಲಾ ಸಾಬ್, ಸೆಲ್ಕ ಫೌಂಡೇಶನ್ ಸಂಯೋಜಕ ಮೈನುದ್ದೀನ್, ಬಿಆರ್‌ಡಬ್ಲ್ಯೂ, ಯುಆರ್‌ಡಬ್ಲ್ಯೂ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣ ಎನ್‌ಐಎ ತನಿಖೆಗೆ ವಹಿಸುವುದು ಅನಿವಾರ್ಯ

**ಬೆಂಗಳೂರು, ಜೂ.10–** ಮಂಗಳೂರಿನ ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸುವುದು ಅನಿವಾರ್ಯ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಗೃಹಸಚಿವ ವಲಯಕ್ಕೆ ಪ್ರದತ್ತವಾದ ಅಧಿಕಾರವಿದೆ. ಆ ಆಧಾರದ ಮೇಲೆ ಅವರು ಎನ್‌ಐಎ ತನಿಖೆಗೆ ವಹಿಸುವಂತೆ ಹೇಳಿದ್ದಾರೆ. ನಮಗೆ ವಹಿಸುವುದು ಅನಿವಾರ್ಯವಿದೆ ಎಂದರು.ಯಾವ ಕಾರಣಕ್ಕೆ ಎನ್‌ಐಎ ತನಿಖೆಯಾಗಬೇಕೆಂದು ಸ್ಪಷ್ಟ ವಿವರಣೆ ನೀಡಿಲ್ಲ. ಆದರೆ ಕೆಲವು ಸೆಕ್ಷನ್‌ಗಳನ್ನು ನಮೂದಿಸಿ ತನಿಖೆಗೆ ವಹಿಸುವಂತೆ ಹೇಳಿದ್ದಾರೆ. ಈ ಪತ್ರದ ಹಿಂದೆ ಬಿಜೆಪಿಯವರ ಕೈವಾಡವಿದೆ ಎಂದು ಪತ್ರದಲ್ಲೇನು ಉಲ್ಲೇಖ ಇಲ್ಲ. ನಮಗೆ ಪ್ರದತ್ತವಾದ ಅಧಿಕಾರವನ್ನು ಬಳಸಿ ತನಿಖೆಗೆ ಕೇಳುತ್ತಿರುವುದಾಗಿ ಹೇಳಿದ್ದಾರೆ. ಹೀಗಾಗಿ ನಮಗೆ ಹೆಚ್ಚಿನ ಮಾಹಿತಿಗಳಿಲ್ಲ ಎಂದರು.ಮುಖ್ಯಮಂತ್ರಿ, ಉಪಮುಖ್ಯಮಂತ್ರಿಯವರನ್ನು ಹೈಕಮಾಂಡ್ ದೆಹಲಿಗೆ ಕರೆಸಿಕೊಂಡಿದೆ. ಅಲ್ಲಿ ಯಾವ ರೀತಿಯ ಚರ್ಚೆಯಾಗಿದೆ ಎಂದು ಗೊತ್ತಿಲ್ಲ. ನನ್ನನ್ನು ಕರೆದಿಲ್ಲ. ಕರೆದರೆ ದೆಹಲಿಗೆ ಹೋಗುತ್ತೇನೆ ಎಂದು ಹೇಳಿದರು.ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಪ್ರಕರಣ ಇಂದು ಹೈಕೋರ್ಟ್‌ನಲ್ಲಿ ವಿಚಾರಣೆಗೆ ಬರಲಿದೆ. ಹೈಕೋರ್ಟ್ ಕೇಳಿರುವ ಪ್ರಶ್ನೆಗಳಿಗೆ ಅಡ್ವಕೇಟ್ ಜನರಲ್ ಸರ್ಕಾರದ ಪರವಾಗಿ ಉತ್ತರವನ್ನು ಸಿದ್ದಪಡಿಸಿ ಪ್ರಮಾಣಪತ್ರ ನೀಡಲಿದ್ದಾರೆ. ವಾಸ್ತವಾಂಶವನ್ನು ಕೋರ್ಟ್ ಮುಂದಿಡಲಾಗುವುದು ಎಂದರು. ಪ್ರಕರಣದ ತನಿಖೆಯ ವರದಿ ಇನ್ನೂ ಸರ್ಕಾರಕ್ಕೆ ಬಂದಿಲ್ಲ. ಈ ಹಂತದಲ್ಲಿ ನಾವು ಯಾವುದೇ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ ಎಂದು ಹೇಳಿದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**